ಕನ್ನಡಪ್ರಭ
ಗುರುವಾರ 7.05.2026

ಗರಿಷ್ಠ 35°c | ಕನಿಷ್ಠ 24°c

ಸುದ್ದಿ ಸಿಂಚನ

ನಾಳೆ ಸಮುದಾಯ ಭವನ ಉದ್ಘಾಟನೆ

ಹಾನಗಲ್ಲ: ಪಟ್ಟಣದಲ್ಲಿ ಶ್ರೀ ಗಂಗಾ ಪರಮೇಶ್ವರಿ ಸಮುದಾಯ ಭವನದ ಉದ್ಘಾಟನೆ ಮೇ 8ರಂದು ನಡೆಯಲಿದೆ. ನಿಜಶರಣ ಅಂಬಿಗರ ಚೌಡಯ್ಯ



ಗುರುಪೀಠದ ಶಾಂತಭೀಷ್ಮ ಚೌಡಯ್ಯ ಮಹಾಸ್ವಾಮಿಗಳು, ಹುಬ್ಬಳ್ಳಿ ಮೂರುಸಾವಿರಮಠದ ಜಗದ್ಗುರು ಡಾ. ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು ಎಂದು ಗಂಗಾಮತ ಸಮಾಜ ಸೇವಾ ಸಂಸ್ಥೆ ಅಧ್ಯಕ್ಷ ಅನಂತವಿಕಾಸ ನಿಂಗೋಜಿ ತಿಳಿಸಿದರು. ಮೇ 8ರಂದು ನಡೆಯುವ ಸಮಾರಂಭದಲ್ಲಿ ಶಾಸಕ ಶ್ರೀನಿವಾಸ ಮಾನೆ ಭೋಜನಾಲಯ ಉದ್ಘಾಟಿಸುವರು. ವಿಧಾನಪರಿಷತ್ ಮುಖ್ಯ ಸಚೇತಕ ಎನ್. ರವಿಕುಮಾರ ಸಭಾಮಂಟಪ ಉದ್ಘಾಟಿಸುವರು. ಮಾಜಿ ಸಚಿವ ಪ್ರಮೋದ ಮಧ್ವರಾಜ ಸಮಾರಂಭ ಉದ್ಘಾಟಿಸುವರು. ಭೂದಾನಿಗಳಾದ ದಿ. ಚಂದ್ರಾಬಾಯಿ ಮಲಗುಂದ ಅವರ ಮಕ್ಕಳಾದ ಚಂದ್ರಶೇಖರ, ಮೋಹನ, ಪ್ರಭು, ಮಾಲತಿ, ಚಂದ್ರಕಲಾ ಅವರನ್ನು ಸನ್ಮಾನಿಸಲಾಗುತ್ತಿದೆ.

ಗಂಗಾಮತ ಸಮಾಜ ಸೇವಾ ಸಂಸ್ಥೆ ಅಧ್ಯಕ್ಷ ಅನಂತವಿಕಾಸ ನಿಂಗೋಜಿ ಅಧ್ಯಕ್ಷತೆವಹಿಸುವರು. ಮುಖ್ಯ ಅತಿಥಿಗಳಾಗಿ ಪ್ರದೀಪ ಶೆಟ್ಟರ, ಶಿವಕುಮಾರ ಉದಾಸಿ, ರಾಘವೇಂದ್ರ ತಹಶೀಲ್ದಾರ, ಮಂಜುನಾಥ ಮತ್ತೂರ, ಬಿ.ವಾಯ್. ಬಂಡಿವಡ್ಡರ, ಭೋಜರಾಜ ಕರೂದಿ, ಲಕ್ಷ್ಮೀ ನಾರಾಯಣಗೌಡ ಪಾಟೀಲ, ಪರಶುರಾಮ ಸೊನ್ನದ, ಪ್ರದೀಪ ಶೇಷಗಿರಿ, ಬಾಸ್ಕರ ಹುಲಮನಿ ಪಾಲ್ಗೊಳ್ಳುವರು ಎಂದು ಅನಂತ ವಿಕಾಸ ನಿಂಗೋಜಿ ತಿಳಿಸಿದರು. ಈ ಸಂದರ್ಭದಲ್ಲಿ ಆಡಳಿತ ಮಂಡಳಿಯ ನಿರ್ದೇಶಕರಾದ ಅಶೋಕ ಆರೆಗೊಪ್ಪ, ಭಾಸ್ಕರ ಹುಲಮನಿ, ಮೈಲಾರೆಪ್ಪ ಶೇಷಗಿರಿ, ಸುರೇಶ ಪೂಜಾರ, ರವಿರಾಜ ಹುಲ್ಲಕ್ಕನವ ಇದ್ದರು.

ವಿದ್ಯುತ್ ತಗುಲಿ ವ್ಯಕ್ತಿ ಸಾವು

ಹಾವೇರಿ: ವಿದ್ಯುತ್ ಕಂಬದಲ್ಲಿ ಕರೆಂಟ್ ರಿಪೇರಿ ಮಾಡುತ್ತಿದ್ದ ವೇಳೆ ಆಕಸ್ಮಿಕವಾಗಿ ವಿದ್ಯುತ್ ತಗುಲಿ ಎಲೆಕ್ಟ್ರಿಷಿಯನ್ ಸಾವನ್ನಪ್ಪಿದ ಘಟನೆ ಜಿಲ್ಲೆಯ ಬಂಕಾಪುರ ಪಟ್ಟಣದಲ್ಲಿ ನಡೆದಿದೆ.ಸಲೀಂ ಅಬ್ದುಲ್ ರಜಾಕ ನೆಲಮನಿ (38) ಎಂಬ ಎಲೆಕ್ಟ್ರಿಷಿಯನ್ ಸಾವನ್ನಪ್ಪಿದ್ದಾರೆ. ಪಟ್ಟಣದ ಆಸಾರ್‌ಓಣಿಯಲ್ಲಿರುವ ಹಜರತ್ ಸೈಯದ್ ಅಲ್ಲಾವುದ್ದೀನ ಶಾ ಖಾದ್ರಿ ದರ್ಗಾದಲ್ಲಿ ವಿದ್ಯುತ್ ಕಂಬದಲ್ಲಿ ರಿಪೇರಿ ಮಾಡುತ್ತಿದ್ದಾಗ ಆಕಸ್ಮಿಕವಾಗಿ ವಿದ್ಯುತ್ ತಗುಲಿದ್ದರಿಂದ ಮೃತಪಟ್ಟಿದ್ದಾರೆಂದು ಮೃತನ ಸಹೋದರ ಮೋದಿನಸಾಬ ನೆಲಮನಿ ಬಂಕಾಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಮೀನು ಹಿಡಿಯಲು ಹೋಗಿ ಸಾವು

ಹಾವೇರಿ: ಕುಮದ್ವತಿ ನದಿಯಲ್ಲಿ ಮೀನು ಹಿಡಿಯಲು ಹೋಗಿದ್ದ ವ್ಯಕ್ತಿಯೊಬ್ಬರು ಆಕಸ್ಮಿಕವಾಗಿ ಕಾಲು ಜಾರಿ ಬಿದ್ದು ಮುಳುಗಿ ಸಾವಿಗೀಡಾಗಿರುವ ಘಟನೆ ರಟ್ಟೀಹಳ್ಳಿ ತಾಲೂಕು ಕೋಡಮಗ್ಗಿ ಗ್ರಾಮದಲ್ಲಿ ನಡೆದಿದೆ. ಚನ್ನಕೇಶವ ರುದ್ರಪ್ಪ ವಾಲ್ಮೀಕಿ (45) ಮೃತ ದುರ್ದೈವಿ. ಇವರು ಕೊಡಮಗ್ಗಿ ಗ್ರಾಮದ ಬಂಗಾರಪ್ಪ ಎಮ್ಮೇರ ಎಂಬುವವರ ಜಮೀನಿನ ಹತ್ತಿರ ಇರುವ ಕುಮದ್ವತಿ ನದಿಯಲ್ಲಿ ಮೀನು ಹಿಡಿಯಲು ಹೋದಾಗ ಘಟನೆ ಸಂಭವಿಸಿದೆ. ಹಿರೇಕೆರೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪೇಟೆ ಧಾರಣೆ

ರಾಣಿಬೆನ್ನೂರು

ಉತ್ಪನ್ನಗಳು	ಕನಿಷ್ಠ	ಗರಿಷ್ಠ
ಹತ್ತಿ	8300	8300
ಶೇಂಗಾ	4197	4197
ಮೆಕ್ಕೆಜೋಳ	1700	2012

ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಡೊನೇಶನ್ ಹಾವಳಿ ತಡೆಗೆ ಆಗ್ರಹಿಸಿ ಮನವಿ



ರಾಣೆಬೆನ್ನೂರು ನಗರದ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಡೊನೆಶನ್ ಹಾವಳಿ ತಡೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ವಿದ್ಯಾರ್ಥಿ ವಿಕಾಸ್ ಪರಿಷತ್ ವತಿಯಿಂದ ನಗರದ ಪೋಸ್ಟ್ ಸರ್ಕಲ್ ಬಳಿ ಕ್ಷೇತ್ರ ಶಿಕ್ಷಣಾಧಿಕಾರಿ ಶಾಮಸುಂದರ ಅಡಿಗ ಅವರಿಗೆ ಮನವಿ ಸಲ್ಲಿಸಲಾಯಿತು.

• **ಕನ್ನಡಪ್ರಭ ವಾರ್ತೆ** ರಾಣಿಬೆನ್ನೂರು

ನಗರದ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಡೊನೇಶನ್ ಹಾವಳಿ ತಡೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ವಿದ್ಯಾರ್ಥಿ ವಿಕಾಸ್ ಪರಿಷತ್ ವತಿಯಿಂದ ಬುಧವಾರ ನಗರದ ಪೋಸ್ಟ್ ಸರ್ಕಲ್ ಬಳಿ ಕ್ಷೇತ್ರ ಶಿಕ್ಷಣಾಧಿಕಾರಿ ಶಾಮಸುಂದರ ಅಡಿಗ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಮಯದಲ್ಲಿ ಕರ್ನಾಟಕ ರಾಜ್ಯ ವಿದ್ಯಾರ್ಥಿ ವಿಕಾಸ್ ಪರಿಷತ್ ರಾಜ್ಯಾಧ್ಯಕ್ಷ ರವೀಂದ್ರಗೌಡ ಪಾಟೀಲ ಮಾತನಾಡಿ, ನಗರದಲ್ಲಿ ನಾಯಿಕೊಡೆಗಳಂತೆ ಹುಟ್ಟಿ ಬಡ ಜನರ ರಕ್ತಹೀರಿ ಹೆಮ್ಮರವಾಗಿ ಬೆಳೆದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಡೊನೇಶನ್ ಹಾವಳಿಗೆ ಜನಸಾಮಾನ್ಯರು ತತ್ತರಿಸಿ ಹೋಗಿದ್ದಾರೆ. ಮೇ 11ರ ಒಳಗಾಗಿ ಶಿಕ್ಷಣ ಇಲಾಖೆಯವರು ಅಧಿಕಾರಿಗಳ ಖಾಸಗಿ ಶಿಕ್ಷಣ ಸಂಸ್ಥೆಯವರು, ಪೋಷಕರ, ಜನಪ್ರತಿನಿಧಿಗಳ, ವಿವಿಧ ಸಂಘಟನೆಗಳ ಸಭೆ ಕರೆದು ಡೊನೇಶನ್ ಹಾವಳಿಗೆ ಕಡಿವಾಣ ಹಾಕುವ ಬಗ್ಗೆ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಇಲ್ಲವಾದರೆ ಮೇ 13ರಂದು ನಗರದ ರೇಲ್ವೆ ಸ್ಟೇಶನ್‌ನಿಂದ ಪ್ರಮುಖ ಬೀದಿಗಳಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಬಸ್‌ಸ್ಟ್ಯಾಂಡ್ ಹತ್ತಿರ ರಸ್ತೆ ತಡೆ ಮಾಡಿ ನಂತರ ಬಿಇಒ ಕಚೇರಿಗೆ ಮುತ್ತಿಗೆ ಹಾಕಿ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಜಗದೀಶ ಕೆರೂಡಿ, ನಿತ್ಯಾನಂದ ಕುಂದಾಪುರ, ಸಿದ್ಧಾರೂಡ ಗುರುಂ ಮತ್ತಿತರರಿದ್ದರು.

ಸಾಲಬಾಧೆ ತಾಳಲಾರದೇ ಚಳಗೇರಿ ಗ್ರಾಮದ ರೈತ ಆತ್ಮಹತ್ಯೆ

• **ಕನ್ನಡಪ್ರಭ ವಾರ್ತೆ** ಹಾವೇರಿ

ಸಾಲಬಾಧೆ ತಾಳಲಾರದೆ ರೈತರೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆ ಸಾವನ್ನಪ್ಪಿರುವ ಘಟನೆ ರಾಣಿಬೆನ್ನೂರು ತಾಲೂಕು ಚಳಗೇರಿ ಗ್ರಾಮದಲ್ಲಿ ನಡೆದಿದೆ.

ಚಳಗೇರಿಯ ಮಹೇಶಪ್ಪ ಶಂಕ್ರಪ್ಪ ಬೆನಕನಕೊಂಡ (67) ನೇಣಿಗೆ ಶರಣಾದ ರೈತ. ಇವರು ಕೃಷಿ ಕೆಲಸಕ್ಕೆಂದು ಬ್ಯಾಂಕಿನಲ್ಲಿ ರು. 1.50 ಲಕ್ಷ ಸಾಲ ಮಾಡಿಕೊಂಡಿದ್ದಾರೆ. ಆಗಾಗ್ಗೆ ಬಡ್ಡಿ ಹಣ ಪಾವತಿಸಿದರೂ ಸಹಿತ ಅಸಲು ಹಣ ಹಾಗೆ ಉಳಿದಿತ್ತು. ಎರಡ್ಮೂರು ವರ್ಷಗಳಿಂದ ಅತಿವೃಷ್ಟಿ, ಅನಾವೃಷ್ಟಿ ಮಳೆಯಿಂದಾಗಿ ಬೆಳೆ ಸರಿಯಾಗಿ ಬಾರದ ಹಿನ್ನೆಲೆ ಈ ಸಾಲವನ್ನು ತೀರಿಸುವುದು ಹೇಗೆ ಎನ್ನುವ ಚಿಂತೆಯಲ್ಲಿ ಮನೆಯ ತಗಡಿಗೆ ಹಾಕಿದ ಕಬ್ಬಿಣದ ಪಟ್ಟಿಗೆ ಶಾಲಿನಿಂದ ನೇಣು ಹಾಕಿಕೊಂಡು ಸಾವನ್ನಪ್ಪಿದ್ದಾನೆ ಎಂದು ಮೃತನ ಮಗ ಮಂಜು ಬೆನಕನಕೊಂಡ ಪೊಲೀಸರ ದೂರಿನಲ್ಲಿ ತಿಳಿಸಿದ್ದಾರೆ. ರಾಣಿಬೆನ್ನೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಡೆಂಘೀ ತಡೆಗೆ ಜಾಗೃತಿ ಮೂಡಿಸಿ

ಅಂತರ್ ಇಲಾಖಾ ಸಮನ್ವಯ ಸಮಿತಿ ಸಭೆಯಲ್ಲಿ ಡಿಸಿ ಡಾ. ದಾನಮ್ಮನವರ



ಹಾವೇರಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಂತರ್‌ಇಲಾಖಾ ಸಮನ್ವಯ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ಮಾತನಾಡಿದರು.

ಡೆಂಘೀ ನಿಯಂತ್ರಣಕ್ಕೆ ವಿವಿಧ ಇಲಾಖೆಗಳು ಕೈಜೋಡಿಸಿ

ನಿರ್ಮಾಣ ಹಂತದಲ್ಲಿರುವ ಕಟ್ಟಡಗಳ ಚಾವಣಿ, ಕಲ್ಲು ಗಣಿಗಾರಿಕೆ ಮತ್ತು ಕೃಷಿ ಹೊಂಡಗಳಲ್ಲಿ, ಕೆ.ಎಸ್.ಆರ್.ಟಿ.ಸಿ. ಡಿಪೋಗಳಲ್ಲಿನ ಟೈರ್‌ನಲ್ಲಿ ನೀರು ನಿಂತು ಅಲ್ಲಿ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ. ಡೆಂಘೀ ತಡೆಗೆ ಆರೋಗ್ಯ ಇಲಾಖೆಯೊಂದಿಗೆ ಸಾರಿಗೆ ಇಲಾಖೆ, ಕೃಷಿ, ತೋಟಗಾರಿಕೆ, ಪಶು ಸಂಗೋಪನೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮೀನುಗಾರಿಕೆ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳು ಕೈಜೋಡಿಸಬೇಕು ಎಂದು ಸೂಚನೆ ನೀಡಿದರು.

• **ಕನ್ನಡಪ್ರಭ ವಾರ್ತೆ** ಹಾವೇರಿ

ನಿಂತ ನೀರಿನಲ್ಲಿ ಈಡೀಸ್ ಈಜಿಪ್ಟೆ ಸೊಳ್ಳೆ ಉತ್ಪಾದನೆಯಿಂದ ಡೆಂಘೀ ಹರಡುವ ಸಾಧ್ಯತೆ ಇದ್ದು, ಇದರ ತಡೆಗೆ ಮುಂಜಾಗ್ರತಾ ಕ್ರಮಗಳ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು. ಜಿಲ್ಲೆಯಲ್ಲಿ ಡೆಂಘೀ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಜೊತೆಗೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಂತರ್ ಇಲಾಖಾ ಸಮನ್ವಯ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳು ಘನತ್ಯಾಜ್ಯ ವಸ್ತುಗಳನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕು ಹಾಗೂ ಗಟಾರುಗಳಲ್ಲಿ ನೀರು ಸರಿಯಾಗಿ ಹರಿದು ಹೋಗುವಂತೆ ಕ್ರಮವಹಿಸಬೇಕು ಎಂದು ತಿಳಿಸಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಜಗದೀಶ್ ಪಾಟೀಲ ಮಾತನಾಡಿ, ಜನವರಿಯಿಂದ ಮಾರ್ಚ್‌ವರೆಗೆ ಜಿಲ್ಲೆಯಲ್ಲಿ ಆರು ಡೆಂಘೀ ಪ್ರಕರಣಗಳು ಹಾಗೂ ಮೂರು ಚಿಕೂನ್‌ಗುನ್ಯ ಪ್ರಕರಣಗಳು ಪತ್ತೆಯಾಗಿವೆ. ಡೆಂಘೀ ಈಡೀಸ್ ಈಜಿಪ್ತಿ ಸೊಳ್ಳೆ ಹಗಲು ಹೊತ್ತು ಕಚ್ಚುವುದರಿಂದ ಡೆಂಘೀ ಜ್ವರ ಬರುತ್ತದೆ. ಇದು ಸಂಗ್ರಹಿಸಿದ ಸ್ವಚ್ಛ ನೀರಿನಲ್ಲಿ ಉತ್ಪತ್ತಿಯಾಗುತ್ತದೆ. ಹಾಗಾಗಿ, ಸಾರ್ವಜನಿಕ ಸ್ಥಳಗಳು, ಕಚೇರಿ ಹಾಗೂ ಮನೆ ಸುತ್ತಮುತ್ತ ನೀರು ನಿಲ್ಲದಂತೆ ಕ್ರಮವಹಿಸಬೇಕು. ಮನೆಗಳಲ್ಲಿ ಡ್ರಮ್ಮು, ಬ್ಯಾರಲ್, ಸಿಮೆಂಟ್ ತೊಟ್ಟಿ, ಕಲ್ಲುಬಾನಿ, ಟೈರ್, ತೆಂಗಿನ ಚಿಪ್ಪು ಹಾಗೂ ಇತರೆ ಘನ ತ್ಯಾಜ್ಯ ವಸ್ತುಗಳಲ್ಲಿ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು ಎಂದರು.

ಜಿಲ್ಲೆಯಲ್ಲಿರುವ ಕೆರೆ, ಹೊಂಡ, ಬಾವಿ ಹಳ್ಳ ಮುಂತಾದ ನೀರಿನ ಮೂಲಗಳಿಗೆ ಡೆಂಘೀ ಲಾರ್ವಾಹಾರಿ ಗಪ್ಪಿ ಮತ್ತು ಗಂಬೂಸಿಯಾ ಮೀನುಗಳನ್ನು ಬಿಡಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಹೊಲ, ಗದ್ದೆ ಕಟ್ಟಡ, ನಿರ್ಮಾಣ ಪ್ರದೇಶ ಮತ್ತು ಇತರೆ ಹೊರಾಂಗಣ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವವರಿಗೆ, ಅಂಗನವಾಡಿ ಹಾಗೂ ಶಾಲೆಗಳಲ್ಲಿ ಶಿಕ್ಷಕರು ಮತ್ತು ವಿದ್ಯಾರ್ಥಿಗಳಿಗೆ ಅಗತ್ಯ ಆರೋಗ್ಯ ಶಿಕ್ಷಣ ನೀಡಬೇಕು ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಜಯಾನಂದ, ಡಾ. ಚನ್ನಬಸಯ್ಯ ವಿರಕ್ತ ಮಠ, ಡಾ. ಸರಿತಾ, ಡಾ. ನೀಲೇಶ, ತಾಲೂಕು ಆರೋಗ್ಯಾಧಿಕಾರಿಗಳು ಉಪಸ್ಥಿತರಿದ್ದರು.

ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ

ಕನ್ನಡ ಭಾಷಾಭಿಮಾನ ಬೆಳೆಸುವಲ್ಲಿ ಕಸಾಪ ಕಾರ್ಯ ಶ್ಲಾಘನೀಯ



ಸವಣೂರ ಕಾರ್ಯಕ್ರಮದಲ್ಲಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಕನ್ನಡ ಮಾಧ್ಯಮದಲ್ಲಿ ಅತಿ ಹೆಚ್ಚು ಅಂಕಗಳಿಸಿ ತಾಲೂಕಿಗೆ ಪ್ರಥಮ, ದ್ವಿತೀಯ, ತೃತೀಯ ಸ್ಥಾನವನ್ನು ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಸವಣೂರು

ಕನ್ನಡಿಗರು ಭಾಷಾ ಅಭಿಮಾನಿಗಳಾಗಬೇಕು, ಕನ್ನಡದ ನೆಲ, ಜಲ, ಭಾಷೆ ಬೆಳವಣಿಗೆಗೆ ಸದಾ ಸನ್ನದ್ಧರಾಗಿರಬೇಕು. ಕನ್ನಡದ ಭಾಷಾಭಿಮಾನ ಬೆಳೆಸುವಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಗಳು ಶ್ಲಾಘನೀಯವಾಗಿವೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಫ್. ಬಾರ್ಕಿ ಹೇಳಿದರು.

> **ಕನ್ನಡಿಗರು ಭಾಷಾ ಅಭಿಮಾನಿಗಳಾಗಬೇಕು, ಕನ್ನಡದ ನೆಲ, ಜಲ, ಭಾಷೆ ಬೆಳವಣಿಗೆಗೆ ಸದಾ ಸನ್ನದ್ಧರಾಗಿರಬೇಕು. ಕನ್ನಡದ ಭಾಷಾಭಿಮಾನ ಬೆಳೆಸುವಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಗಳು ಶ್ಲಾಘನೀಯವಾಗಿವೆ.**
> • **ಎಂ.ಎಫ್. ಬಾರ್ಕಿ**
> ಕ್ಷೇತ್ರ ಶಿಕ್ಷಣಾಧಿಕಾರಿ

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಸವಣೂರ ಹಾಗೂ ಹಿತ್ತಲಮನಿ ಕೋಚಿಂಗ್ ಕ್ಲಾಸೆಸ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಾ. ಜಾಫರುಲ್ಲಾಖಾನ್ ಕೆ.ಕೆ. ಉಪನ್ಯಾಸ ನೀಡಿ. ಕನ್ನಡ ಸಾಹಿತ್ಯ ಪರಿಷತ್ತು ಸ್ಥಾಪನೆಗೊಂಡ ಹಿನ್ನೆಲೆಯನ್ನು ತಿಳಿಸಿ, ಪರಿಷತ್ತು ಸ್ಥಾಪನೆಗೊಳ್ಳಲು ಕಾರಣರಾದ ರಾಜರ್ಸಿ ನಾಲ್ವಡಿ ಕೃಷ್ಣರಾಜ ಒಡೆಯರ್, ದಿವಾನ್ ಸರ್‌ಎಂ. ವಿಶ್ವೇಶ್ವರಯ್ಯ, ದಿವಾನ್ ಸರ್‌ಮಿರ್ಜಾ ಇಸ್ಮಾಯಿಲ್ ಅವರ ಕೊಡುಗೆಯನ್ನು ಸ್ಮರಿಸಿಕೊಂಡು, ಪರಿಷತ್ತು ಹಲವಾರು ಸಮ್ಮೇಳನಗಳು ಹಾಗೂ ಕಾರ್ಯಕ್ರಮಗಳ ಮೂಲಕ ಕನ್ನಡದ ಅಭಿಮಾನ ಪೂರ್ವಕವಾದ ಚಟುವಟಿಕೆಗಳನ್ನು ಹಮ್ಮಿಕೊಂಡು ಕನ್ನಡದ ನೆಲ, ಜಲ ಭಾಷೆಗಾಗಿ ಸಾಹಿತ್ಯ ಪರಿಷತ್ತು ಶ್ರಮಿಸುತ್ತಿದೆ ಎಂದರು.

ತಾಲೂಕು ಕಸಾಪ ಅಧ್ಯಕ್ಷ ಚಂದ್ರಗೌಡ ಪಾಟೀಲ್ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಪ್ರಭು ಅರಗೋಳ, ವೀರೇಶ ಹಿತ್ತಲಮನಿ, ಬಸವರಾಜ ಕಟಗಿಹಳ್ಳಿ, ಆರ್.ಎನ್. ತುಂಡೂರ, ಈರಯ್ಯ ಹಿರೇಮಠ, ಎಂ.ಎಸ್. ಅಕ್ಕಿ, ವಿಶ್ವನಾಥ ಹಾವಣಗಿ, ಬಸನಗೌಡ ಪಾಟೀಲ, ಮಹಾಂತೇಶ ಕುತನಿ, ಎಚ್. ಎನ್. ಭಜಂತ್ರಿ, ರಾಜು ಕುಮರಿ, ಕೋಚಿಂಗ್ ಕ್ಲಾಸ್ ಶಿಕ್ಷಕರು, ಪಾಲಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಸನ್ 2025-26ನೇ ಸಾಲಿನ ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆಯಲ್ಲಿ ಕನ್ನಡ ಮಾಧ್ಯಮದಲ್ಲಿ ಅತಿ ಹೆಚ್ಚು ಅಂಕಗಳಿಸಿ ತಾಲೂಕಿಗೆ ಪ್ರಥಮ, ದ್ವಿತೀಯ, ತೃತೀಯ ಸ್ಥಾನವನ್ನು ಪಡೆದ ವಿದ್ಯಾರ್ಥಿಗಳಾದ ತವರಮೆಳ್ಳಿ ಹಳ್ಳಿ ಪ್ರೌಢಶಾಲೆಯ ನವೀನ್ ಕುಮಾರ್, ಪ್ರಕಾಶ್ ಬಾರ್ಕಿ, ಕುಣಿ ಮೆಳ್ಳಿಹಳ್ಳಿ ಪ್ರೌಢಶಾಲೆಯ ಎಲ್ಲಪ್ಪ ಜಗದೀಶ್ ಆಡೂರ್, ಮತ್ತೋಡಿ ಪ್ರೌಢಶಾಲೆಯ ಐಶ್ವರ್ಯ ಜಯಪ್ರಕಾಶ್ ಗಾಡಗೋಳಿ, ಜಲ್ಲಾಪುರ ಪ್ರೌಢಶಾಲೆಯ ತನುಜಾ, ರಾಜು ಕುಮರಿ ಈ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕೋಚಿಂಗ್ ಸೆಂಟರನ ವಿದ್ಯಾರ್ಥಿಗಳು ಪ್ರಾರ್ಥನಾ ಗೀತೆ ಹಾಗೂ ನಾಡಗೀತೆಯನ್ನು ಹಾಡಿದರು. ಎಸ್.ವಿ. ಕೋಳಿವಾಡ ಸ್ವಾಗತಿಸಿದರು. ಸಿ.ವಿ. ಗುತ್ತಲ ನಿರೂಪಿಸಿದರು. ಎಂ.ಎಸ್. ಮಲ್ಲನಗೌಡ್ರ ವಂದಿಸಿದರು.

ಶಿಕ್ಷಣ ದುಬಾರಿ ಹಾಗೂ ಹೆಚ್ಚು ಸ್ಪರ್ಧಾತ್ಮಕವಾಗುತ್ತಿದೆ



ಚಿಕ್ಕಾಂಸಿಹೊಸೂರಿನಲ್ಲಿ ವೃತ್ತಿ ಮಾರ್ಗದರ್ಶನ ಕಾರ್ಯಕ್ರಮವನ್ನು ತಾಪಂ ಮಾಜಿ ಅಧ್ಯಕ್ಷ ಸಿದ್ದನಗೌಡ ಪಾಟೀಲ ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ಶಿಕ್ಷಣ ದುಬಾರಿ ಹಾಗೂ ಅತಿ ಹೆಚ್ಚು ಸ್ಪರ್ಧಾತ್ಮಕವಾಗಿರುವ ಈ ಕಾಲದಲ್ಲಿ ಮಕ್ಕಳ ಶೈಕ್ಷಣಿಕ ಹಿತಕ್ಕಾಗಿ ಪಾಲಕರು ಸೂಕ್ತ ಶಿಕ್ಷಣ ಸಂಸ್ಥೆಗಳನ್ನು ಆಯ್ಕೆ ಮಾಡಿಕೊಳ್ಳುವ ಹೊಣೆಗಾರಿಕೆಯನ್ನು ನಿರ್ವಹಿಸಬೇಕಾಗಿದೆ ಎಂದು ಸಾಹಿತಿ ಪ್ರೊ. ಮಾರುತಿ ಶಿಡ್ಲಾಪೂರ ತಿಳಿಸಿದರು.

ಹಾನಗಲ್ಲ ತಾಲೂಕಿನ ಚಿಕ್ಕಾಂಸಿ ಹೊಸೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ ವೃತ್ತಿ ಮಾರ್ಗದರ್ಶನ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಒಂದು ಕಾಲದಲ್ಲಿ ಮನೆಗಳೇ ಶಿಕ್ಷಣ ಸಂಸ್ಕಾರದ ಕೇಂದ್ರಗಳಾಗಿದ್ದವು. ಆದರೆ ಈಗ ಕಾಲ ಬದಲಾಗಿದೆ. ಎಲ್ಲವನ್ನೂ ಶಾಲೆಗಳಿಂದಲೇ ಕಲಿಯಬೇಕಾದ ಅನಿವಾರ್ಯತೆ ಇದೆ. ಈಗ ಗಣಕೀಕರಣದ ಜೊತೆಗೆ ಶಿಕ್ಷಣವನ್ನು ಪಡೆಯುವ ಅತಿ ವೇಗದ ದಾರಿಯಲ್ಲಿ ನಾವಿದ್ದೇವೆ. ಪ್ರತಿ ಕ್ಷಣವನ್ನು ಸದುಪಯೋಗ ಮಾಡಿಕೊಂಡು ಇಂದಿನ ಸ್ಪರ್ಧೆಯಲ್ಲಿ ಯಶ ಕಾಣುವ ಇಚ್ಛಾಶಕ್ತಿ ಪ್ರತಿ ವಿದ್ಯಾರ್ಥಿಗೆ ಬೇಕಾಗಿದೆ. ಸರ್ಕಾರಿ ಶಾಲೆಗಳು ಕೂಡ ಈಗ ಅತ್ಯುತ್ತಮ ಸೌಲಭ್ಯಗಳನ್ನು ಹೊಂದಿ ಶಿಕ್ಷಣ ನೀಡುವಲ್ಲಿ ಪೈಪೋಟಿಯಲ್ಲಿವೆ ಎಂದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ತಾಲೂಕು ಪಂಚಾಯತ್ ಮಾಜಿ ಅಧ್ಯಕ್ಷ ಸಿದ್ದನಗೌಡ ಪಾಟೀಲ, ಮಕ್ಕಳಿಗೆ ಒಳ್ಳೆಯ ಭವಿಷ್ಯ ಕಲ್ಪಿಸಿ ಕೊಡುವ ಹೊಣೆಗಾರಿಕೆ ಈಗ ಪಾಲಕರ ಮೇಲಿದೆ. ದೂರದ ಊರುಗಳಲ್ಲಿ ಮಕ್ಕಳನ್ನಿಟ್ಟು ನಿತ್ಯ ಮಕ್ಕಳ ನೆನಪಿನಲ್ಲಿಯೇ ಕಾಲ ಕಳೆಯುವ ಅನಿವಾರ್ಯತೆ ಪಾಲಕರದ್ದಾಗಿದೆ. ಈಗ ಸರ್ಕಾರ ಮನೆ ಬಾಗಿಲಿನಲ್ಲಿಯೇ ಅತ್ಯುತ್ತಮ ಶಿಕ್ಷಣ ಸಂಸ್ಥೆಗಳನ್ನು ಆರಂಭಿಸಿ ಶೈಕ್ಷಣಿಕ ಸೌಲಭ್ಯ ಕಲ್ಪಿಸಿರುವುದರಿಂದ ಇಂತಹ ಸರ್ಕಾರಿ ಶಾಲೆ ಕಾಲೇಜುಗಳಲ್ಲಿ ನಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸುವ ಕೆಲವಾಗಬೇಕು. ಇಲ್ಲಿನ ಅತ್ಯುತ್ತಮ ಶಿಕ್ಷಕ ಉಪನ್ಯಾಸಕರೂ ಇದ್ದಾರೆ. ಒಳ್ಳೆಯ ಫಲಿತಾಂಶವೂ ಇಲ್ಲಿದೆ ಎಂದರು.

ಅಧ್ಯಕ್ಷತೆವಹಿಸಿ ಮಾತನಾಡಿದ ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಶಿವಾನಂದಪ್ಪ ಈಳಿಗೇರ, ಪಾಲಕರ ಕಣ್ಗಾವಲಿನಲ್ಲಿಯೇ ಮಕ್ಕಳು ವಿದ್ಯಾರ್ಜನೆ ಮಾಡಬೇಕಾದ ಅನಿವಾರ್ಯತೆಯತ್ತ ಎಲ್ಲರೂ ಗಮನ ಕೊಡಬೇಕಾಗಿದೆ. ನಮ್ಮ ಸುತ್ತಮುತ್ತಲೂ ಉತ್ತಮ ಶಿಕ್ಷಣ ಸಂಸ್ಥೆಗಳಿದ್ದರೂ ಕೂಡ ದೂರದ ಊರುಗಳಿಗೆ ಶಿಕ್ಷಣಕ್ಕಾಗಿ ಮಕ್ಕಳು ಧಾವಿಸುತ್ತಿದ್ದಾರೆ. ಇದು ಬದಲಾಗಬೇಕು. ಸರ್ಕಾರ ಕಲ್ಪಿಸಿದ ಸೌಲಭ್ಯಗಳನ್ನು ಬಳಸಿಕೊಳ್ಳಬೇಕು ಎಂದರು.

ಪ್ರಾಚಾರ್ಯ ಡಿ. ರಾಮಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಆರ್.ಕೆ. ಲೋಚನಾ ಸ್ವಾಗತಿಸಿದರು. ನಾಗರಾಜ ಕುರುಬರ ಕಾರ್ಯಕ್ರಮ ನಿರೂಪಿಸಿದರು. ಡಾ. ಜೆ. ದೀಪಾ ವಂದಿಸಿದರು.

ಎರಡು ವರ್ಷಗಳ ಉಚಿತ ಪಿಯುಸಿ ಶಿಕ್ಷಣ-ಪ್ರಸನ್ನ

• **ಕನ್ನಡಪ್ರಭ ವಾರ್ತೆ** ಹಾವೇರಿ



ಪ್ರಸನ್ನ ಕೆ.ಎಲ್.

ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿಯಲ್ಲಿರುವ ತುಂಗಾ ವಿದ್ಯಾವರ್ಧಕ ಸಂಘವು ವಜ್ರ ಮಹೋತ್ಸವ ಆಚರಿಸಿಕೊಳ್ಳುತ್ತಿದ್ದು, ಈ ವಜ್ರ ಮಹೋತ್ಸವದ ಕೊಡುಗೆಯಾಗಿ ಎಸ್ಸೆಸ್ಸೆಲ್ಸಿಯಲ್ಲಿ ಶೇ. 70ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಎರಡು ವರ್ಷಗಳ ಉಚಿತ ಪಿಯುಸಿ ಶಿಕ್ಷಣ ನೀಡುವ ಯೋಜನೆಗೆ ಮುಂದಾಗಿದೆ. ಜಿಲ್ಲೆಯ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತುಂಗಾ ಪಿಯು ಕಾಲೇಜು ಪ್ರಾಚಾರ್ಯ ಪ್ರಸನ್ನ ಕೆ.ಎಲ್. ತಿಳಿಸಿದರು.

ನಗರದ ಪತ್ರಿಕಾಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಲೆನಾಡಿನ ತೀರ್ಥಹಳ್ಳಿಯಲ್ಲಿ 1967ರಲ್ಲಿ ಪ್ರಾರಂಭಗೊಂಡ ತುಂಗಾ ವಿದ್ಯಾ ಸಂಸ್ಥೆಯು ವಜ್ರ ಮಹೋತ್ಸವದ ಹೊಸ್ತಿಲಿನಲ್ಲಿದೆ. ಈ ಸಂಘದ ಮೂಲಕ ಪಿಯು ಕಾಲೇಜು, ಪದವಿ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರಗಳನ್ನು ನಡೆಸಲಾಗುತ್ತಿದ್ದು, ಮಲೆನಾಡು ಭಾಗದಲ್ಲಿ ಶೈಕ್ಷಣಿಕ ಕ್ರಾಂತಿಯನ್ನು ಮಾಡಿದೆ. ತುಂಗಾ ವಿದ್ಯಾಸಂಸ್ಥೆಯು ಶಿಕ್ಷಣವನ್ನು ವ್ಯಾಪಾರವನ್ನಾಗಿ ನೋಡದೆ ಸೇವೆ ಎಂದು ಪರಿಗಣಿಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ, ಸಮಾಜದ ಕಡು ಬಡತನದ ವಿದ್ಯಾರ್ಥಿಗಳಿಗೆ ದಾರಿದೀಪವಾಗಿ ನಿಂತು ಉಚಿತ ಶಿಕ್ಷಣ ನೀಡುತ್ತಾ ಬಂದಿದೆ ಎಂದರು.

ಸರ್ಕಾರಿ ಅನುದಾನಕ್ಕೆ ಒಳಪಟ್ಟಿರುವ ಈ ಸಂಸ್ಥೆಯು ಮುಂಬರುವ ಶೈಕ್ಷಣಿಕ ವರ್ಷದಲ್ಲಿ ವಜ್ರ ಮಹೋತ್ಸವವನ್ನು ಆಚರಿಸಿಕೊಳ್ಳುತ್ತಿದೆ. ಇದರ ಕೊಡುಗೆಯಾಗಿ ಸಂಸ್ಥೆಯ ಆಡಳಿತ ಮಂಡಳಿಯು ವಿದ್ಯಾರ್ಥಿಗಳು ಹಾಗೂ ಪೋಷಕ ಸಮೂಹಕ್ಕೆ ಎರಡು ವರ್ಷಗಳ ಉಚಿತ ಶಿಕ್ಷಣ ಯೋಜನೆ ಸೌಲಭ್ಯ ಒದಗಿಸುತ್ತಿದೆ. ಶೇ.70ಕ್ಕಿಂತ ಹೆಚ್ಚು ಅಂಕ ಪಡೆದ ಮಕ್ಕಳಿಗೆ ಉಚಿತ ಶಿಕ್ಷಣ ನೀಡಲು ಮುಂದಾಗಿದೆ. ಮಲೆನಾಡು ಭಾಗದಲ್ಲಿ ಶಿಕ್ಷಣ ಕಲಿಯಬೇಕೆಂಬ ವಿದ್ಯಾರ್ಥಿಗಳಿಗೆ ಹೆಚ್ಚು ಉಪಯುಕ್ತವಾಗಲಿದೆ. ಕಲಾ, ವಿಜ್ಞಾನ ಹಾಗೂ ವಾಣಿಜ್ಯ ವಿಭಾಗಗಳಲ್ಲಿ ತಲಾ 50ರಂತೆ ಒಟ್ಟು 150 ಸೀಟ್‌ಗಳ ಭರ್ತಿಗೆ ಅವಕಾಶ ಇರಲಿದ್ದು, ಜಿಲ್ಲೆಯ ವಿದ್ಯಾರ್ಥಿಗಳು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಾಲೇಜಿನಲ್ಲಿ ಮೂಲ ಸೌಕರ್ಯಗಳು ಸೇರಿದಂತೆ ಸುಸಜ್ಜಿತ ಲ್ಯಾಬ್, ಗ್ರಂಥಾಲಯ, ಮೈದಾನ ಹೀಗೆ ಎಲ್ಲ ಆಧುನಿಕ ಸೌಲಭ್ಯಗಳು ಇವೆ. ಸಂಸ್ಥೆಯ ಅಡಿಯಲ್ಲಿ ಹಾಸ್ಟೆಲ್ ಸೌಲಭ್ಯ ಇದ್ದು, ಹಾಸ್ಟೆಲ್‌ನಲ್ಲಿ ಶುಲ್ಕದ ರಿಯಾಯಿತಿ ಇರುತ್ತದೆ. ಹಾಸ್ಟೆಲ್‌ನ ವಸತಿ, ಊಟೋಪಚಾರ ಸಂಬಂಧಿಸಿದಂತೆ ಹಾಸ್ಟೆಲ್ ದತ್ತು ಪಡೆದುಕೊಳ್ಳಲು ರಾಜಕೀಯ ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳನ್ನು ಸಂಪರ್ಕಿಸಲಾಗುತ್ತಿದೆ ಎಂದು ವಿವರಿಸಿದರು. ಸಂಸ್ಥೆಯ ನಿರ್ದೇಶಕ ಎಲ್.ಕೆ ನಟರಾಜ ಇದ್ದರು.

ಶರಣ ಸಂಗಮ... ಹಾನಗಲ್ಲಿನ ಕುಮಾರೇಶ್ವರ ವಿರಕ್ತ ಮಠದಲ್ಲಿ ಶರಣ ಸಂಗಮ ಹಾಗೂ ಕಾಯಕ ದಿನ ಕಾರ್ಯಕ್ರಮ

ಬಸವಣ್ಣನವರ ಕಾಯಕ ಎಂಬುದು ಸತ್ಯ-ಡಾ. ಪ್ರಸನ್ನಕುಮಾರ

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ಜಾತ್ಯತೀತ ಸಮಾಜದ ಕನಸು ನನಸಾಗಿಸುವ ಜಗಜ್ಯೋತಿ ಬಸವಣ್ಣನವರ ಆಶಯ ಈಡೇರಲು ಈ ನಾಡಿನ ಪ್ರತಿ ವ್ಯಕ್ತಿ ಬಸವಣ್ಣನವರ ಸಿದ್ಧಾಂತ ಕಾಯಕ ಸತ್ಯದ ಶಕ್ತಿಯನ್ನು ಅರಿತು ನಡೆದರೆ ಮಾತ್ರ ಸಾಧ್ಯ. ಕಾಯಕವೇ ಕೈಲಾಸ ಎಂಬುದೇ ಸತ್ಯ ಎಂದು ಸಾಹಿತಿ ಡಾ. ಎಂ. ಪ್ರಸನ್ನಕುಮಾರ ತಿಳಿಸಿದರು.

ಹಾನಗಲ್ಲಿನ ಶ್ರೀ ಕುಮಾರೇಶ್ವರ ವಿರಕ್ತಮಠದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕ ಹಾಗೂ ಕದಳಿ ಮಹಿಳಾ ವೇದಿಕೆ ಸಂಯುಕ್ತವಾಗಿ ಆಯೋಜಿಸಿದ ಶರಣ ಸಂಗಮ ಹಾಗೂ ಕಾಯಕ ದಿನ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಜಗತ್ತಿನ ಮೊದಲ ಸಂವಿಧಾನ ಕೊಟ್ಟವರು ಬಸವಣ್ಣನವರು. ಪ್ರಜಾ ಪ್ರಭುತ್ವದ ಸ್ಪಷ್ಟ ನಿಲುವು ಬಸವಣ್ಣನವರ ವೈಚಾರಿಕತೆಯಲ್ಲಿದೆ. ಇಂದು ಆಳುವವ ಆಳಿಸಿಕೊಳ್ಳುವವರಿಗೆ



ಶರಣ ಸಂಗಮ ಕಾರ್ಯಕ್ರಮವನ್ನು ನಿವೃತ್ತ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಕಲ್ಲಪ್ಪ ಚಿಕ್ಕೇರಿ ಉದ್ಘಾಟಿಸಿದರು.

ಸಮಾನ ನೀತಿ ನಿಯಮಗಳು ಅನ್ವಯವಾಗುತ್ತಿಲ್ಲ. ಈ ಕಾರಣಕ್ಕಾಗಿ ಅಸಮಾನತೆ ತಾಂಡವಾಡುತ್ತಿದೆ. ಎಲ್ಲರಿಗೂ ಸಮಾನ ಗೌರವ ಸೌಲಭ್ಯಗಳು ಲಭ್ಯವಾಗಬೇಕು. ಮೇಲು ಕೀಳಿಲ್ಲದೆ ಸಮಾಜ ವ್ಯವಸ್ಥೆ ನಮ್ಮದಾಗಬೇಕು. ಬಸವಣ್ಣನವರ ದಾಸೋಹದ ಕಲ್ಪನೆ ಜಾರಿಯಾಗಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ನಿವೃತ್ತ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಕಲ್ಲಪ್ಪ ಚಿಕ್ಕೇರಿ, ನಮ್ಮ ಕೆಲಸಗಳಲ್ಲಿ ಪ್ರಾಮಾಣಿಕತೆ ಅತ್ಯಂತ ಮುಖ್ಯ. ಬಸವಣ್ಣನವರ ಕಾಯಕ ತತ್ವದ ನಡೆ ನಮ್ಮದಾದರೆ ನಿಜಕ್ಕೂ ಸಮಾನತೆ ಸಹಜವಾಗಿಯೇ ಬರಲು ಸಾಧ್ಯ. ತಾರತಮ್ಯ ವ್ಯವಸ್ಥೆಯಲ್ಲಿರುವ ನಮಗೆ ಸಮಾನತೆ ಸಾಧ್ಯವೇ ಎಂಬ ಪ್ರಶ್ನೆ ಕಾಡುತ್ತಿದೆ ಎಂದರು.

ಅಧ್ಯಕ್ಷತೆವಹಿಸಿ ಮಾತನಾಡಿದ ಮುಖ್ಯ ಶಿಕ್ಷಕಿ ಶೋಭಾ ಪಾಟೀಲ, ಬಸವಣ್ಣನವರ ಕಾಯಕ ಧರ್ಮವನ್ನು ಶಾಲೆ ಕಾಲೇಜುಗಳಲ್ಲಿ ಪ್ರಮುಖ ವಿಷಯವಾಗಿ ಅನುಭವಕ್ಕೆ ತಂದುಕೊಡುವ ತೀರ ಅಗತ್ಯವಿದೆ. ಸಮಾಜಮುಖಿ ಚಿಂತನೆಗೆ ಸಹಕಾರಿಯಾಗುವ ಯಾವುದೇ ವಿಚಾರಗಳನ್ನು ಅಲ್ಲಗಳೆಯದೆ ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವ ಸಂಕಲ್ಪ ಬೇಕಾಗಿದೆ. ಈಗ ಉತ್ತಮ ಸಂಸ್ಕಾರದ ಅಗತ್ಯ ಪ್ರತಿ ಮಗುವಿಗೆ ಇದೆ. ಅದನ್ನು ಸಾಕಾರ ಮಾಡಲು ಇಂತಹ ಕಾರ್ಯಕ್ರಮಗಳು ಶಾಲೆ ಕಾಲೇಜುಗಳಲ್ಲಿ ನಡೆಯುವಂತಾಗಬೇಕು ಎಂದರು.

ಶರಣ ಸಾಹಿತ್ಯ ಪರಿಷತ್ ತಾಲೂಕು ಘಟಕದ ಅಧ್ಯಕ್ಷ ಎಸ್.ಕೆ. ಕಲ್ಲನಗೌಡರ ಪ್ರಾಸ್ತಾವಿಕ ಮಾತನಾಡಿದರು. ಅಕ್ಕಮ್ಮ ಶೆಟ್ಟರ, ವಿಕಾಸ ಬೈಲಪ್ಪನವರ, ನೇಹಾ ಬೈಲಪ್ಪನವರ, ಸಾನ್ವಿ ಬೈಲಪ್ಪನವರ, ಶ್ರೀನವಿ ಬೈಲಪ್ಪನವರ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ನ್ಯಾಯವಾದಿ ಎಂ.ಎಸ್. ಹುಲ್ಲೂರ ಸ್ವಾಗತಿಸಿದರು. ಉಪಾಧ್ಯಕ್ಷ ಶಂಭುಲಿಂಗಯ್ಯ ಹೇಮಗಿರಿಮಠ ಸ್ವಾಗತಿಸಿದರು. ಸುಭಾಸ ಹೊಸಮನಿ ನಿರೂಪಿಸಿದರು.

ಭಕ್ತಿಯ ಮೂಲಕ ಸಮಾಜದ ಸುಧಾರಣೆಗೆ ಶ್ರಮಿಸಿದ ಕನಕದಾಸರನ್ನು, ಇಡೀ ದೇಶವೇ ಕೊಂಡಾಡುತ್ತದೆ. ಕನಕದಾಸರು ಹುಟ್ಟಿ-ಬೆಳೆದ ಹಾವೇರಿ ಜಿಲ್ಲೆಯಲ್ಲಿಯೂ ಅವರ ಹೆಸರನ್ನು ಮತ್ತಷ್ಟು ಅಜರಾಮರವಾಗಿಸಬೇಕಿದೆ.

• **ಬಸವರಾಜ ಶಿವಣ್ಣನವರ** ಶಾಸಕ


ಸುದ್ದಿ ಸಿಂಚನ

ಆಸ್ತಿ ತೆರಿಗೆ ವಿನಾಯಿತಿ ಕೋರಿ ಮನವಿ



ಬ್ಯಾಡಗಿ: ಪಟ್ಟಣದಲ್ಲಿರುವ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಕಟ್ಟಡಕ್ಕೆ ಆಸ್ತಿ ತೆರಿಗೆ ಆಕರಣೆ ಮಾಡದಂತೆ ಕೋರಿ ಪರಿಷತ್ ಪದಾಧಿಕಾರಿಗಳು ಹಾಗೂ ಸಾಹಿತಿಗಳು ಪುರಸಭೆ ಮುಖ್ಯಾಧಿಕಾರಿ ವಿನಾಯಕುಮಾರ ಹೊಳೆಪ್ಪಗೋಳ ಅವರಿಗೆ ಮನವಿ ಸಲ್ಲಿಸಿದರು. ಈ ವೇಳೆ ತಾಲೂಕು ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ.ಎಂ. ಜಗಾಪುರ ಮಾತನಾಡಿ, ತಾಲೂಕಿನಲ್ಲಿ ಸಾಹಿತ್ಯ ಪರಿಷತ್ತಿಗೆ ಸ್ವಂತ ಕಟ್ಟಡವೇ ಇರಲಿಲ್ಲ, ಇಂತಹ ದುಸ್ಥಿತಿಯಲ್ಲಿ ದಾನಿಗಳು ಹಾಗೂ ಸಾಹಿತಿಗಳ ಸಹಕಾರದಿಂದ ಕಟ್ಟಡ ನಿರ್ಮಾಣ ಕಾರ್ಯ ಆರಂಭಿಸಲಾಯಿತು. ಮಧ್ಯದಲ್ಲಿ ನಿರ್ಮಾಣ ಕಾರ್ಯ ನಿಂತಾಗ, ಎಲ್ಲ ಸದಸ್ಯರು ಕನ್ನಡಾಭಿಮಾನಿಗಳು ಸ್ವಂತ ಹಣ ಹಾಕಿ ಕಟ್ಟಡವನ್ನು ಪೂರ್ಣಗೊಳಿಸಲು ಪ್ರಯತ್ನಿಸಿದ್ದೇವೆ. ಇದೀಗ ಕರ ಪಾವತಿ ಮಾಡುವುದು ಕಷ್ಟವಾಗಿದ್ದು ಆದ್ದರಿಂದ ಕರ ಆಕರಣೆ ಮಾಡದಂತೆ ಮನವಿ ಮಾಡಿದರು. ಧರ್ಮಸ್ಥಳ ಸಂಘದವರು ಶೌಚಾಲಯ ನಿರ್ಮಾಣಕ್ಕೆ ಸಹಾಯ ಮಾಡುವ ಭರವಸೆ ನೀಡಿದ್ದು, ಈಗಾಗಲೇ ಕಾಮ ಗಾರಿ ಪ್ರಾರಂಭವಾಗಿದೆ. ಕನ್ನಡ ಭಾಷೆ ಮತ್ತು ಸಾಹಿತ್ಯದ ಅಭಿವೃದ್ಧಿಗಾಗಿ ಕಾರ್ಯನಿರ್ವಹಿಸುತ್ತಿರುವ ಪರಿಷತ್ ಕಟ್ಟಡಕ್ಕೆ ಆಸ್ತಿ ತೆರಿಗೆ ವಿನಾಯಿತಿ ನೀಡಬೇಕು ಎಂದು ಅವರು ಆಗ್ರಹಿಸಿದರು. ಈ ವೇಳೆ ಪರಿಷತ್ ಗೌರವ ಕಾರ್ಯದರ್ಶಿ ಎಸ್.ಬಿ.ಇಮ್ಮಡಿ, ಉಪಾಧ್ಯಕ್ಷೆ ಸಂಧ್ಯಾರಾಣಿ ದೇಶಪಾಂಡೆ, ಸಂಘಟನಾ ಕಾರ್ಯದರ್ಶಿ ರಾಜಣ್ಣ ಹೊಸಳ್ಳಿ, ನಿಕಟಪೂರ್ವ ಅಧ್ಯಕ್ಷ ಮಾಲತೇಶ ಅರಳೀಮಟ್ಟಿ ಹಾಗೂ ಸಾಹಿತಿಗಳಾದ ಜೀವರಾಜ ಛತ್ರದ, ಮಾಲತೇಶ ಚಳಗೇರಿ, ನಿವೃತ್ತ ಪ್ರಾಚಾರ್ಯ ಆನಂದ ಮುದುಕಮ್ಮನವರ, ಕೃಷ್ಣಾ ಬಡಿಗೇರ, ಪಠಾಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪುಟ್ಟಪ್ಪ ಕಡ್ಲೇಪ್ಪನವರ ನಿಧನ



ರಾಣೆಬೆನ್ನೂರು: ಇಲ್ಲಿಯ ಉಮಾಶಂಕರ ನಗರದ ನಿವಾಸಿ, ಸಮಾಜ ಕಲ್ಯಾಣ ಇಲಾಖೆಯ ನಿವೃತ್ತ ಅಧಿಕಾರಿ ಪುಟ್ಟಪ್ಪ ಭರಮಪ್ಪ ಕಡ್ಲೆಪ್ಪನವರ (78) ಮಂಗಳವಾರ ನಿಧನರಾದರು. ಇವರಿಗೆ ಪತ್ನಿ, ಇಬ್ಬರು ಪುತ್ರರು, ಒಬ್ಬ ಪುತ್ರಿ ಹಾಗೂ ಅಪಾರ ಬಂಧು ಬಳಗವಿದೆ.

ಬೆಳೆ ವಿಮೆ ವಿತರಣೆಯಲ್ಲಿ ಅನ್ಯಾಯ: ಬಿಜೆಪಿ ಪ್ರತಿಭಟನೆ

ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 23 ಪಂಚಾಯಿತಿ ರೈತರಿಗೆ ಬಾರದ ಬೆಳೆವಿಮೆ



ಹಿರೇಕೆರೂರು ಪಟ್ಟಣದಲ್ಲಿ ತಾಲೂಕಿನ ರೈತ ಬಾಂಧವರು ಮತ್ತು ಬಿಜೆಪಿ ವತಿಯಿಂದ ಬೆಳೆ ವಿಮೆ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಬುಧವಾರ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾಜಿ ಸಚಿವ ಬಿ.ಸಿ. ಪಾಟೀಲ ಮಾತನಾಡಿದರು.

- 2025-26ನೇ ಸಾಲಿನಲ್ಲಿ ಹಿರೇಕೆರೂರು, ರಟ್ಟೀಹಳ್ಳಿ ರೈತರು ಅಕಾಲಿಕ ಮಳೆ ಹಾಗೂ ಪ್ರಕೃತಿ ವಿಕೋಪಗಳಿಂದ ಬೆಳೆಗಳ ರಕ್ಷಣೆಗಾಗಿ ಬೆಳೆ ವಿಮೆ ಮಾಡಿಸಿ ಹಣ ತುಂಬಿದ್ದಾರೆ. ಆದರೆ ತಾಲೂಕಿನ ಕೆಲವೊಂದು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ರೈತರಿಗೆ ಬೆಳೆವಿಮೆ ಜಮಾ ಆಗಿದ್ದು, ಉಳಿದಂತೆ 23 ಗ್ರಾಮ ಪಂಚಾಯಿತಿಗಳ ಗ್ರಾಮಗಳ ರೈತರಿಗೆ ಜಮಾ ಆಗಿರುವುದಿಲ್ಲ.

• **ಕನ್ನಡಪ್ರಭ ವಾರ್ತೆ** ಹಿರೇಕೆರೂರು

2025-2026ರ ಬೆಳೆವಿಮೆ ಎರಡು ತಾಲೂಕಿನ 23 ಪಂಚಾಯಿತಿಗಳಿಗೆ ಇಂದಿನವರೆಗೂ ಜಮೆ ಆಗಿರುವುದಿಲ್ಲ. ಕೃಷಿ ಇಲಾಖೆ ಮತ್ತು ಕಂದಾಯ ಹಾಗೂ ಸಾಂಖಿಕ ಇಲಾಖೆಗಳ ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯದಿಂದ ರೈತರಿಗೆ ಅನ್ಯಾಯವಾಗಿದೆ ಎಂದು ಆರೋಪಿಸಿ ರೈತರು ಹಾಗೂ ಬಿಜೆಪಿ ಕಾರ್ಯಕರ್ತರು ಬುಧವಾರ ಇಲ್ಲಿ ಪ್ರತಿಭಟನೆ ನಡೆಸಿ ಮನವಿ ಅರ್ಪಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಸಚಿವ ಬಿ.ಸಿ. ಪಾಟೀಲ ಮಾತನಾಡಿ, 2025-26ನೇ ಸಾಲಿನಲ್ಲಿ ಹಿರೇಕೆರೂರು, ರಟ್ಟೀಹಳ್ಳಿ ರೈತರು ಅಕಾಲಿಕ ಮಳೆ ಹಾಗೂ ಪ್ರಕೃತಿ ವಿಕೋಪಗಳಿಂದ ಬೆಳೆಗಳ ರಕ್ಷಣೆಗಾಗಿ ಬೆಳೆ ವಿಮೆ ಮಾಡಿಸಿ ಹಣ ತುಂಬಿದ್ದಾರೆ. ಆದರೆ ತಾಲೂಕಿನ ಕೆಲವೊಂದು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ರೈತರಿಗೆ ಬೆಳೆವಿಮೆ ಜಮಾ ಆಗಿದ್ದು, ಉಳಿದಂತೆ 23 ಗ್ರಾಮ ಪಂಚಾಯಿತಿಗಳ ಗ್ರಾಮಗಳ ರೈತರಿಗೆ ಜಮಾ ಆಗಿರುವುದಿಲ್ಲ. ಈಗ ಜಮಾ ಆದ ರೈತರು ಹಾಗೂ ಜಮಾ ಆಗದೇ ಇರುವ ರೈತರ ಜಮೀನುಗಳು ಅಕ್ಕ-ಪಕ್ಕದಲ್ಲಿ ಇದ್ದರೂ ಅಂಕಿ-ಅಂಶಗಳ ಅಧಿಕಾರಿಗಳ ಬೇಜವಾಬ್ದಾರಿ ಸಮೀಕ್ಷೆ ಮಾಡಿದ್ದು, ಹಣ ಜಮಾ ಆಗಿರುವುದಿಲ್ಲ. ಕಾರಣ ಕೃಷಿ ಇಲಾಖೆ, ಕಂದಾಯ ಇಲಾಖೆ ಅಧಿಕಾರಿಗಳ ನಿರ್ಲಕ್ಷ್ಯತನದಿಂದ ರೈತರಿಗೆ ಅನ್ಯಾಯವಾಗಿದೆ. ಬೆಳೆ ವಿಮೆ ಬಾರದೆ ಇರುವುದರಿಂದ ತಾಲೂಕಿನ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ರಾಜ್ಯ ಸರ್ಕಾರ ಹಾಗೂ ವಿಮೆ ಕಂಪನಿಯವರು ಅಧಿಕಾರಿಗಳು ರೈತರ ನೆರವಿಗೆ ಧಾವಿಸದೇ ನಿರ್ಲಕ್ಷ್ಯ ವಹಿಸಿದ್ದಾರೆ. ತಹಸೀಲ್ದಾರ್ ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ಕೂಡಲೇ ನಮ್ಮ ತಾಲೂಕಿನ ರೈತರ ವಿಮೆ ಹಣ ರೈತರ ಖಾತೆಗೆ ಬಿಡುಗಡೆಗೊಳಿಸಬೇಕು ಇಲ್ಲದೇ ಹೋದರೆ ಜಿಲ್ಲಾ ಕೃಷಿ ಇಲಾಖೆ ಅಧಿಕಾರಿಗಳ ಕಚೇರಿಗೆ ಶೀಘ್ರದಲ್ಲೇ ಮುತ್ತಿಗೆ ಹಾಕಲಾಗುವುದು. ಸಕಾಲಕ್ಕೆ ಗೊಬ್ಬರ ಸಿಗುತ್ತಿಲ್ಲ, ದಿನಕ್ಕೊಂದು ಹೊಸ ನಿಯಮ ಮಾಡುತ್ತಿದ್ದು, ಇದಿಗ ಗೊಬ್ಬರಕ್ಕೆ ಎಫ್ಐಡಿ ಮತ್ತು ಲಿಂಕ್ ಎಂಬುವುದನ್ನು ತಂದಿದ್ದಾರೆ ಎಂದರು.

ಪಟ್ಟಣದ ಸರ್ವಜ್ಞ ವೃತ್ತದಿಂದ ತಹಸೀಲ್ದಾರ್ ಕಚೇರಿವರೆಗೆ ಪ್ರತಿಭಟನಾ ರ್‍ಯಾಲಿ ನಡೆಸಿ ಮನವಿ ಸಲ್ಲಿಸಲಾಯಿತು.

ಬಿಜೆಪಿ ಮಂಡಲ ಅಧ್ಯಕ್ಷ ಸಂಜೀವಯ್ಯ ಕಬ್ಬಿಣಕಂತಿಮಠ, ದೇವರಾಜ ನಾಗಣ್ಣನವರ, ಎನ್.ಎಂ. ಈಟೇರ, ಜೆ.ಪಿ. ಪ್ರಕಾಶ, ರವಿಶಂಕರ ಬಾಳಿಕಾಯಿ, ಆರ್.ಎನ್. ಗಂಗೋಳ, ಶಿವು ಕುಮಾರ ತಿಪ್ಪಶಟ್ಟಿ, ಗುರುಶಾಂತ ಎತ್ತಿನಹಳ್ಳಿ, ಹರೀಶ್ ಕಲಾಲ್, ರುದ್ರಗೌಡ ನೀಲನಗೌಡ್ರ, ಆನಂದಪ್ಪ ಹಾದಿಮನಿ, ಬಸವರಾಜ ಭರಮಗೌಡ, ಮಹ್ಮದ್ ಹುಸೇನ್ ವಡ್ಡಿನಕಟ್ಟಿ, ಬಸಮ್ಮ ಅಬಲೂರು, ಉಮೇಶ ಬಣಕಾರ, ಹುಚ್ಚನಗೌಡ, ಕಬ್ಬಕ್ಕಿ, ಹನುಮಂತಪ್ಪ ಗಾಜೇರ, ಮಹೇಶ ಭರಮಗೌಡ, ಜಗದೀಶ ದೊಡ್ಡಗೌಡ, ನಾಗರಾಜ ಹಿರೇಮಠ, ಮನೋಹರ ವಡ್ಡಿನಕಟ್ಟೆ, ಬಸನಗೌಡ ದೊಡ್ಡಗೌಡ್ರ, ದುರಗೇಶ ತಿರಕಪ್ಪನವರ, ಗಂಗಾಧರ್, ಬೋಗೇರ, ಜಿಲಾನಿ ಬಳೆಗಾರ, ವಿಜಯ ಮಡಿವಾಳರ, ಬಸವರಾಜ ಚಿಂದಿ, ಹನುಮಂತಪ್ಪ ಮೇಗಳಮನಿ, ಹೊನ್ನಪ್ಪ ಸಾಲಿ, ಸಿ.ಎಸ್. ಚಳಗೇರಿ, ಪ್ರದೀಪ್ ಪಾಟೀಲ್, ಪುಟ್ಟನಗೌಡ ಪಾಟೀಲ, ಶೇಖಪ್ಪ ತುಮ್ಮಿನಕಟ್ಟಿ, ರಾಜು ಹುಚಗೊಂಡ್ರ, ಈರಣ್ಣ ಚಿಟ್ಟೂರು, ಪಕ್ಷದ ಕಾರ್ಯಕರ್ತರು, ಮುಖಂಡರು ಇದ್ದರು.

ಅನಧಿಕೃತ ಮದ್ಯ ಮಾರಾಟ, ದೂರು ದಾಖಲು

• **ಕನ್ನಡಪ್ರಭ ವಾರ್ತೆ** ಹಾವೇರಿ

ಮನೆಯಲ್ಲಿ ಅನಧಿಕೃತವಾಗಿ ಅಕ್ರಮ ಮದ್ಯ ಸಂಗ್ರಹಿಸಿಕೊಂಡು ಮಾರಾಟ ಮಾಡುತ್ತಿದ್ದ ಆರೋಪದಡಿ ವ್ಯಕ್ತಿಯೊಬ್ಬರ ವಿರುದ್ಧ ದೂರು ದಾಖಲಾಗಿದೆ. ತಾಲೂಕಿನ ಕೋಣನತಂಬಿಗಿ ಗ್ರಾಮದ ರಮೇಶ ಯಮನಪ್ಪ ಕಳ್ಳಿಮನಿ (35) ಎಂಬಾತನ ವಿರುದ್ಧ ದೂರು ದಾಖಲಿಸಲಾಗಿದೆ. ಆರೋಪಿತರು ಅಕ್ರಮ ಮದ್ಯವನ್ನು ಸಂಗ್ರಹಿಸಿ ಇಟ್ಟುಕೊಂಡು, ಲೈಸೆನ್ಸ್ ಪಡೆದುಕೊಳ್ಳದೆ ಮಾರಾಟ ಮಾಡುತ್ತಿದ್ದಾಗ ಪೊಲೀಸರು ದಾಳಿ ನಡೆಸಿದ ಕಾಲಕ್ಕೆ ಸಿಕ್ಕಿ ಬಿದ್ದಿದ್ದಾರೆ. ಆರೋಪಿತರಿಂದ 2,320 ರು. ಮೌಲ್ಯದ ಮದ್ಯದ ಪ್ಯಾಕೆಟ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಎಫ್ಐಆರ್‌ನಲ್ಲಿ ತಿಳಿಸಿದೆ. ಹಾವೇರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ

ಕಸಾಪದಿಂದ ಕನ್ನಡದ ನೆಲ, ಜಲ ಭಾಷೆ ಸಂರಕ್ಷಣೆ



ಶಿಗ್ಗಾಂವಿ ತಾಲೂಕಿನ ಗಂಜಿಗಟ್ಟಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ನಡೆದ ಕಸಾಪ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ವಿವಿಧ ಗಣ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

- ಕನ್ನಡ ನಾಡು, ನುಡಿ, ಸಂಸ್ಕೃತಿಗಳ ರಕ್ಷಣೆಗಾಗಿ ನಾಲ್ವಡಿ ಕೃಷ್ಣರಾಜ ಒಡೆಯರ ಅವರು ವಿಶೇಷ ಕಾಳಜಿ ವಹಿಸಿ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾಗಿ ಪರಿಷತ್ ಸ್ಥಾಪನೆಗೊಳ್ಳಲು ಪ್ರಮುಖ ಕಾರಣರು.
- ಪತ್ರಿಕೆಗಳನ್ನು ಕೊಂಡು ಓದುವುದು, ಪುಸ್ತಕಗಳನ್ನು ಖರೀದಿಸುವುದು ಹಾಗೂ ಮಕ್ಕಳಲ್ಲಿ ಓದುವ ಹವ್ಯಾಸ ಬೆಳೆಸುವ ಮೂಲಕ ಕನ್ನಡ ಹಾಗೂ ಕನ್ನಡ ಬರಹಗಾರರನ್ನು ಪ್ರೋತ್ಸಾಹಿಸಬೇಕಿದೆ.

• **ಕನ್ನಡಪ್ರಭ ವಾರ್ತೆ** ಶಿಗ್ಗಾಂವಿ

ಕನ್ನಡದ ನೆಲ, ಜಲ, ಭಾಷೆ, ಸಾಹಿತ್ಯ, ಜನಪದ, ಸಂಸ್ಕೃತಿಗಳ ಸಂರಕ್ಷಣೆ ಮತ್ತು ಸಂವರ್ಧನೆಯ ಮಹದಾಸೆಯೊಂದಿಗೆ ಮೈಸೂರು ಸಂಸ್ಥಾನದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ ಅವರು ಸ್ಥಾಪಿಸಿದ ಕನ್ನಡ ಸಾಹಿತ್ಯ ಪರಿಷತ್ತು ಇಂದು ಸರ್ವರನ್ನು ಒಳಗೊಂಡು, ಸರ್ವರ ಒಳತಿಗಾಗಿ, ಸರ್ವರ ಶ್ರೇಯೋಭಿವೃದ್ಧಿಗಾಗಿ ಕಾರ್ಯ ನಿರ್ವಹಿಸುತ್ತಾ ವಸುದೇವ ಕುಟುಂಬಕಂ ಎಂಬ ಸಂದೇಶವನ್ನು ಸಾರುತ್ತಿರುವುದು ಸಂತೋಷದ ವಿಷಯ ಎಂದು ಕನ್ನಡರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಶಿವಾನಂದ ಮ್ಯಾಗೇರಿ ಹೇಳಿದರು.

ತಾಲೂಕಿನ ಗಂಜಿಗಟ್ಟಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಗಪ್ಪ ಬೆಂತೂರ ಪ್ರಾಸ್ತಾವಿಕವಾಗಿ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತಿಗೆ 111 ವರ್ಷಗಳ ಸಂಭ್ರಮ, ಕನ್ನಡ ನಾಡು, ನುಡಿ, ಸಂಸ್ಕೃತಿಗಳ ರಕ್ಷಣೆಗಾಗಿ ನಾಲ್ವಡಿ ಕೃಷ್ಣರಾಜ ಒಡೆಯರ ಅವರು ವಿಶೇಷ ಕಾಳಜಿ ವಹಿಸಿ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾಗಿ ಪರಿಷತ್ ಸ್ಥಾಪನೆಗೊಳ್ಳಲು ಪ್ರಮುಖ ಕಾರಣರು. ಪರಿಷತ್ತನ್ನು ಜನಸಾಮಾನ್ಯರ ಪರಿಷತ್ತಾಗಬೇಕೆಂದು ಕನಸು ಕಂಡದ್ದು ಅಕ್ಷರ ಸಹ ಅದು ಇಂದು ನನಸಾಗಿದೆ. ಪರಿಷತ್ತಿನ ಸೇವೆ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ. ಒಡೆಯರ ಅವರ ಜೊತೆಗೆ ಸಂಸ್ಥಾನದಲ್ಲಿ ದಿವಾನರಾಗಿದ್ದ ಸರ್‌ಎಂ. ವಿಶ್ವೇಶ್ವರಯ್ಯ ಹಾಗೂ ಸರ್‌ಮಿರ್ಜಾ ಇಸ್ಮಾಯಿಲ್ ಅವರು ಕನ್ನಡ ಸಾಹಿತ್ಯ ಪರಿಷತ್ತಿನ ಬೆಳವಣಿಗೆಗೆ ಪ್ರಮುಖ ಪಾತ್ರವಹಿಸಿದ್ದಾರೆ ಎಂದರು. ಜೊತೆಗೆ ಪತ್ರಿಕೆಗಳನ್ನು ಕೊಂಡು ಓದುವದು, ಪುಸ್ತಕಗಳನ್ನು ಖರೀದಿಸುವದು ಹಾಗೂ ಮಕ್ಕಳಲ್ಲಿ ಓದುವ ಹವ್ಯಾಸ ಬೆಳೆಸುವ ಮೂಲಕ ಕನ್ನಡ ಹಾಗೂ ಕನ್ನಡ ಬರಹಗಾರರನ್ನು ಪ್ರೋತ್ಸಾಹಿಸಬೇಕಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ಕುರಿತು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಗಂಜಿಗಟ್ಟಿಯ ಕಿರಿಯ ತರಬೇತಿ ಅಧಿಕಾರಿ ಶಶಿಕಾಂತ ರಾಠೋಡ ಅವರು ಕನ್ನಡ ಭಾಷೆ ಬೆಳವಣಿಗೆಗೆ ಮತ್ತು ಕನ್ನಡದ ಅಸ್ಮಿತೆಯನ್ನು ಉಳಿಸಿ ಬೆಳೆಸಲು ಎಲ್ಲರೂ ಶ್ರಮಿಸಬೇಕಿದೆ ಹಾಗೂ ಕನ್ನಡ-ಕನ್ನಡಿಗ-ಕರ್ನಾಟಕದ ಹಿತರಕ್ಷಣೆಯ ಜವಾಬ್ದಾರಿಯನ್ನು ಹೊಂದಿರುವ ಕನ್ನಡ ಸಾಹಿತ್ಯ ಪರಿಷತ್ತು ಪ್ರತಿಯೊಬ್ಬ ಪ್ರಜೆಯ ಮನೆ-ಮನವನ್ನು ಮುಟ್ಟುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನ ಸಾಮಾನ್ಯರ ಪರಿಷತ್ತಾಗಿ ಬೆಳೆದಿರುವುದು ಕನ್ನಡಿಗರ ಹೆಮ್ಮೆ ಎಂದರು.

ಗಂಜಿಗಟ್ಟಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಆಡಳಿತಾಧಿಕಾರಿ ರವಿಕುಮಾರ ಡಿ. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಬಸವರಾಜ ಹೆಸರೂರ, ರಾಘವೇಂದ್ರ ಕೌಜಲಗಿ, ರಮೇಶ ಹರಿಜನ, ಅಶೋಕ ಕಾಳೆ, ಶಂಭು ಕೇರಿ, ಆನಂದಗೌಡ ಹಿರೇಗೌಡರ, ಶಶಾಂಕ ಕೌಜಲಗಿ, ಸುಶೀಲಾ ಗೋಣಿ, ಬಸವರಾಜು, ನಾಗರಾಜ ಭೋವಿ, ಸುಭಾಷ, ಗುರುಪ್ರಸಾದ, ಗಂಗಮ್ಮ, ಜ್ಯೋತಿ, ಮಕ್ಕಳು, ಸಾಹಿತ್ಯಾಭಿಮಾನಿಗಳು ಉಪಸ್ಥಿತರಿದ್ದರು.

ಹೊನ್ನಪ್ಪ ಕರೆಕನ್ನಮ್ಮನವರ ಸ್ವಾಗತಿಸಿದರು. ವಿಶಾಲಾಕ್ಷಿ ಜಾಧವ ನಿರೂಪಿಸಿದರು. ರಾಜು ಕೆಂಬಾವಿ ವಂದಿಸಿದರು.

ಪ್ರೀತಿ, ವಿಶ್ವಾಸ ನಮ್ಮ ಸಂಕಲ್ಪವಾಗಲಿ

ಹಿರೇಹುಲ್ಲಾಳ ಗ್ರಾಮದೇವಿ ದೇವಸ್ಥಾನದ ನೂತನ ಕಟ್ಟಡದ ಉದ್ಘಾಟನಾ ಸಮಾರಂಭ

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ಮನಸ್ಸು ವೈಮನಸ್ಸಾಗುವುದು ಬೇಡ, ತಾರತಮ್ಯದಿಂದ ಸಾಮಾಜಿಕ ವಾತಾವರಣ ಹದಗೆಡುವುದು ಬೇಡ, ಪರಸ್ಪರ ಪ್ರೀತಿ, ವಿಶ್ವಾಸದಿಂದ ಅನ್ಯೋನ್ಯವಾಗಿ ಬದುಕುವುದೇ ನಮ್ಮೆಲ್ಲರ ಸಂಕಲ್ಪವಾಗಬೇಕಾಗಿದೆ ಎಂದು ಶಾಸಕ ಶ್ರೀನಿವಾಸ ಮಾನೆ ಕರೆ ನೀಡಿದರು.

ತಾಲೂಕಿನ ಹಿರೇಹುಲ್ಲಾಳ ಗ್ರಾಮದಲ್ಲಿ ಗ್ರಾಮದೇವಿ ದೇವಸ್ಥಾನದ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದ ಹಿನ್ನೆಲೆಯಲ್ಲಿ ನಡೆದ ಧರ್ಮಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮೇಲು-ಕೀಳು ಭಾವನೆ ಸಮಾಜವನ್ನು ಇನ್ನಷ್ಟು ಕುಗ್ಗಿಸಲಿದೆ. ಎಲ್ಲರೂ ಒಂದಾಗಿ ಬದುಕಿದರೆ ಶಕ್ತಿ ಹೆಚ್ಚಲಿದೆ. ಜಾತಿ, ಮತ, ಪಂಥಗಳನ್ನು ಒಗ್ಗೂಡಿಸಿ ಮುನ್ನಡೆಸದಿದ್ದರೆ ಸಮಾಜ ಛಿದ್ರಗೊಳ್ಳುವ ಆತಂಕ ಹೆಚ್ಚಿದೆ. ಕುಟಿಲ ಸಾಮಾಜಿಕ ನೀತಿಗಳನ್ನು ಕೈಬಿಟ್ಟು ಸಮಾಜ ಕಟ್ಟುವ ಕಾಯಕದಲ್ಲಿ ಪ್ರತಿಯೊಬ್ಬರೂ ಕೈಜೋಡಿಸಬೇಕಿದೆ ಎಂದು ಹೇಳಿದ ಅವರು ಕಾಲ ಬದಲಾದಂತೆ ಅಂತರ್ಜಲ ಕುಸಿಯುತ್ತಿದೆ. ಇಂಥ ಸಂಕಷ್ಟದ ಸಮಯದಲ್ಲಿ ಪ್ರತಿಯೊಬ್ಬರೂ ಜವಾಬ್ದಾರಿ ಅರಿತುಕೊಳ್ಳಬೇಕಿದೆ. ಅಮೂಲ್ಯ ಜೀವಜಲವನ್ನು ಮುಂದಿನ ಪೀಳಿಗೆವರೆಗೆ ಸಂರಕ್ಷಿಸಬೇಕಿದೆ ಎಂದರು.

ಸಾನ್ನಿಧ್ಯ ವಹಿಸಿದ್ದ ಅಕ್ಕಿಆಲೂರಿನ ವಿರಕ್ತಮಠದ ಶಿವಬಸವ ಸ್ವಾಮೀಜಿ, ಕೂಸನೂರಿನ ತಿಪಯ್ಯಸ್ವಾಮಿ ಆಶ್ರಮದ ಜ್ಯೋತಿರ್ಲಿಂಗಾನಂದ ಸ್ವಾಮೀಜಿ ಮಾತನಾಡಿ, ಅತ್ಯಾಚಾರ, ಅನಾಚಾರಗಳಿಗೆ ಲಗಾಮು ಹಾಕುವ ಅಗತ್ಯವಿದ್ದು, ನಮ್ಮ ದೇಶದ ಸಂಸ್ಕೃತಿ, ಸಂಸ್ಕಾರವನ್ನು ಉಳಿಸಿ-ಬೆಳೆಸುವ ಕಾರ್ಯ ನಡೆಯಬೇಕಿದೆ. ಸಂಸಾರಿಕ ಮತ್ತು ವ್ಯವಹಾರಿಕ ಜಂಜಾಟಗಳು ಇಂದು ಪ್ರತಿಯೊಬ್ಬರ ಅಮೂಲ್ಯ ಜೀವನದಲ್ಲಿ ನೆಮ್ಮದಿ ದೂರ ಮಾಡಿವೆ. ಅಶಾಂತಿ, ಅಸಹನೆ, ಅಸಮಾಧಾನ ಎಲ್ಲರ ಮನೆ, ಮನಗಳಲ್ಲಿ ಮೂಡುತ್ತಿದ್ದು ಇಂತಹ ಆಂತರಿಕ ತೊಳಲಾಟಗಳಿಗೆ ಮುಕ್ತಿ ನೀಡಬೇಕಿದೆ ಎಂದರು.

ಜಿಪಂ ಮಾಜಿ ಸದಸ್ಯ ಮಹದೇವಪ್ಪ ಬಾಗಸರ, ಮುಖಂಡರಾದ ಮಧುಪಾಣಿಗಟ್ಟಿ, ಶಿವಯೋಗಯ್ಯ ಹಿರೇಮಠ, ಕರೆಗೌಡ ಚನ್ನಗೌಡ್ರ, ಹವಳಪ್ಪ, ಆರ್.ಬಿ. ಪಾಟೀಲ, ಪುಟ್ಟನಗೌಡ ಮಾಳಗಿ, ಶ್ರೀಕಾಂತಗೌಡ ಪುಟ್ಟನಗೌಡ್ರ, ಮಾಲತೇಶ ಕೊಟ್ಟಣದ ಇದ್ದರು.



ಹಿರೇಹುಲ್ಲಾಳದಲ್ಲಿ ನಡೆದ ಧರ್ಮಸಭೆಯನ್ನು ಶಾಸಕ ಶ್ರೀನಿವಾಸ ಮಾನೆ ಉದ್ಘಾಟಿಸಿದರು. ಶಿವಬಸವ ಸ್ವಾಮೀಜಿ, ಜ್ಯೋತಿರ್ಲಿಂಗಾನಂದ ಸ್ವಾಮೀಜಿ ಇದ್ದರು.

ಹೆಮ್ಮೆ... ಕುರುಬ ಸಮುದಾಯದ ಸಭೆಯಲ್ಲಿ ಶಾಸಕ ಶಿವಣ್ಣನವರ

ತಿಂಗಳಲ್ಲಿ ಕನಕದಾಸ ಮೂರ್ತಿ ಪ್ರತಿಷ್ಠಾಪನೆ

• **ಕನ್ನಡಪ್ರಭ ವಾರ್ತೆ** ಹಾವೇರಿ

ತಿರುಪತಿಯಲ್ಲಿ ಇತ್ತೀಚೆಗೆ ಪ್ರತಿಷ್ಠಾಪಿಸಿರುವ ಮಾದರಿಯ ದಾಸಶ್ರೇಷ್ಠ ಕನದಾಸರ ಮೂರ್ತಿಯನ್ನು ಹಾವೇರಿಯ ಕಾಗಿನೆಲೆ ವೃತ್ತದಲ್ಲಿಯೂ ಪ್ರತಿಷ್ಠಾಪನೆ ಮಾಡಲು ತೀರ್ಮಾನಿಸಲಾಗಿದೆ ಎಂದು ಕುರುಬ ಸಮುದಾಯದ ಮುಖಂಡರೂ ಆಗಿರುವ ಶಾಸಕ ಬಸವರಾಜ ಶಿವಣ್ಣನವರ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಬುಧವಾರ ನಡೆದ ಕುರುಬ ಸಮುದಾಯದ ಸಭೆಯಲ್ಲಿ ಅವರು ಮಾತನಾಡಿದರು.

ಭಕ್ತಿಯ ಮೂಲಕ ಸಮಾಜದ ಸುಧಾರಣೆಗೆ ಶ್ರಮಿಸಿದ ಕನಕದಾಸರನ್ನು, ಇಡೀ ದೇಶವೇ ಕೊಂಡಾಡುತ್ತದೆ. ಕನಕದಾಸರು ಹುಟ್ಟಿ-ಬೆಳೆದ ಹಾವೇರಿ ಜಿಲ್ಲೆಯಲ್ಲಿಯೂ ಅವರ ಹೆಸರನ್ನು ಮತ್ತಷ್ಟು ಅಜರಾಮರವಾಗಿಸಬೇಕಿದೆ. ಹಲವು ಕಡೆಗಳಲ್ಲಿ ಈಗಾಗಲೇ ಅವರ ಮೂರ್ತಿ ಪ್ರತಿಷ್ಠಾಪಿಸಲಾಗಿದೆ. ಜಿಲ್ಲಾ ಕೇಂದ್ರದಲ್ಲಿಯೂ ಮೂರ್ತಿ ಬೇಕೆಂಬ ಕೂಗು ಈಗ ನನಸಾಗುತ್ತಿದೆ ಎಂದರು.

ಕಾಗಿನೆಲೆ ವೃತ್ತದಲ್ಲಿ ವಾಹನಗಳ ದಟ್ಟಣೆ ಹೆಚ್ಚಿದ್ದು, ಅಪಘಾತಗಳು ಆಗುತ್ತಿವೆ. ಮಧ್ಯದಲ್ಲಿ ಮೂರ್ತಿ ಪ್ರತಿಷ್ಠಾಪನೆಗೆ ಕಷ್ಟವಾಗುತ್ತದೆ. ಹೀಗಾಗಿ, ಕನಕ ಕುರಿ ಮತ್ತು ಉಣ್ಣೆ ನೇಕಾರರ ಸಹಕಾರಿ ಸಂಘಕ್ಕೆ ಹೊಂದಿಕೊಂಡಿರುವ ಜಾಗದಲ್ಲಿ ಮೂರ್ತಿ ಇರಿಸಲಾಗುವುದು. ಮೂರ್ತಿ ಸಿದ್ಧಪಡಿಸಲು 10 ಲಕ್ಷ ರು. ಖರ್ಚಾಗಲಿದೆ. ವೃತ್ತದ ಅಭಿವೃದ್ಧಿಗೆ ನಗರಾಭಿವೃದ್ಧಿ ಪ್ರಾಧಿಕಾರವು 25 ಲಕ್ಷ ರು. ನೀಡಿದೆ. ಉಳಿದ ಕೆಲಸಗಳಿಗೆ 10 ಲಕ್ಷದಿಂದ 15 ಲಕ್ಷ ರು. ಬೇಕಾಗಬಹುದು. ನಾನೂ 1 ಲಕ್ಷ ರು. ಕೊಡುತ್ತೇನೆ. ಎಲ್ಲರೂ ಕೈಲಾದಷ್ಟು ದೇಣಿಗೆ ನೀಡಿ, ಮೂರ್ತಿ ಪ್ರತಿಷ್ಠಾಪಿಸೋಣ ಎಂದರು.

ಕುರುಬ ಸಮುದಾಯದ ಮುಖಂಡರೂ ಆಗಿರುವ ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್.ಎನ್. ಗಾಜೀಗೌಡ್ರ ಮಾತನಾಡಿ, ಹಾವೇರಿಯ ಕಾಗಿನೆಲೆ ವೃತ್ತದಲ್ಲಿ ತಿಂಗಳ ಒಳಗಾಗಿ ಕನಕದಾಸರ ಮೂರ್ತಿ ಪ್ರತಿಷ್ಠಾಪನೆ ಮಾಡಲಾಗುವುದು. ಇದಕ್ಕೆ ಸಮುದಾಯದ ಜನರು ಒಗ್ಗಟ್ಟಿನಿಂದ ಸಹಕಾರ ನೀಡಬೇಕು ಎಂದರು.

ಮೂರ್ತಿ ಪ್ರತಿಷ್ಠಾಪಿಸುವ ಅವಕಾಶ ಬಂದಿದೆ. ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡೋಣ. ಕಾಗಿನೆಲೆ ಗುರುಪೀಠದಲ್ಲಿ ಈ ಬಾರಿ ಕನಕ ಜಯಂತಿ ಆಚರಿಸುವ ಜವಾಬ್ದಾರಿಯನ್ನು ಹಾವೇರಿ ತಾಲೂಕಿಗೆ ನೀಡಲಾಗಿದೆ. ಕಳೆದ ಬಾರಿ ರಾಣೆಬೆನ್ನೂರಿನವರು ಅದ್ದೂರಿ ಆಚರಣೆ ಮಾಡಿದ್ದರು. ಈ ಬಾರಿ ನಾವೆಲ್ಲರೂ ದೇಣಿಗೆ ಸಂಗ್ರಹಿಸಿ ಅಭೂತಪೂರ್ವ ಆಚರಣೆ ಮಾಡೋಣ ಎಂದರು.

ಸಮುದಾಯದ ಮುಖಂಡರಾದ ಮಹಾದೇವಗೌಡ್ರ ಗಾಜೀಗೌಡ್ರ, ನಾಗರಾಜ ಆನ್ವೇರಿ, ಅಶೋಕ ಬಣಕಾರ, ಹನುಮಂತಗೌಡ್ರ ಗಾಜೀಗೌಡ್ರ, ಬಸಣ್ಣ ಕಂಬಳಿ, ಅಶೋಕ ಮುದಕಣ್ಣನವರ, ವಿಜಯಕುಮಾರ ಮುದಕಣ್ಣನವರ, ಬಸವರಾಜ ಕೋಟಿ ಹಾಗೂ ತಾಲೂಕು ಅಧ್ಯಕ್ಷ ವೀರಪಾಕ್ಷ ಹುಲ್ಲೂರ, ನಿಂಗಪ್ಪ ತುಕ್ಕಣ್ಣನವರ ಇತರರಿದ್ದರು.



ಹಾವೇರಿ ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಕುರುಬ ಸಮುದಾಯದ ಸಭೆಯಲ್ಲಿ ಶಾಸಕ ಬಸವರಾಜ ಶಿವಣ್ಣನವರ ಮಾತನಾಡಿದರು.

ಕಡೇನಂದಿಹಳ್ಳಿ ತಪೋ ಕ್ಷೇತ್ರ ಶ್ರೀಗಳ ಪಟ್ಟಾಧಿಕಾರ ವರ್ಧಂತಿ ಮಹೋತ್ಸವ

• **ಕನ್ನಡಪ್ರಭ ವಾರ್ತೆ** ಹಿರೇಕೆರೂರು

ತಾಲೂಕಿನ ಚನ್ನಳ್ಳಿ ಸಮೀಪದ ಕಡೇನಂದಿಹಳ್ಳಿ ತಪೋಕ್ಷೇತ್ರದ ರೇವಣಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳವರ ದ್ವಾದಶ ಪಟ್ಟಾಧಿಕಾರ ವರ್ಧಂತಿ ವರ್ಷಾಚರಣೆ ಮಹಾಮಂಗಲ ಹಾಗೂ ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮದ ದಶಮಾನೋತ್ಸವ ಸಂದರ್ಭದಲ್ಲಿ ಶ್ರೀಮದ್ ರಂಭಾಪುರಿ ಖಾಸಾ ಮಠವಾಗಿ ಪುನರ್ ನಾಮಕರಣ ಧರ್ಮ ಸಮಾರಂಭವನ್ನು ಮೇ 9ರಂದು ಏರ್ಪಡಿಸಲಾಗಿದೆ.

ಬಾಳೆಹೊನ್ನೂರು ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಜರುಗುವ ಸಮಾರಂಭದ ಅಧ್ಯಕ್ಷತೆಯನ್ನು ಅ.ಭಾ. ವೀರಶೈವ ಶಿವಾಚಾರ್ಯ ಸಂಸ್ಥೆ ಅಧ್ಯಕ್ಷರಾದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯ ಸ್ವಾಮಿಗಳು ವಹಿಸುವರು. ರೇವಣಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳವರು ಧರ್ಮ ಸಂದೇಶ ನೀಡುವರು.

ಸಂಸದಬಿ.ವೈ.ರಾಘವೇಂದ್ರಸಮಾರಂಭವನ್ನು ಉದ್ಘಾಟಿಸುವರು. ಪುಣ್ಯಾಶ್ರಮದ ನೀಲನಕ್ಷೆಯನ್ನು ಶಾಸಕ-ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ಕೋಟೆ ನಿರ್ಮಾಣ ಕಾರ್ಯ ಪ್ರಕಟಣೆಯನ್ನು ಶಾಸಕ ಯು.ಬಿ. ಬಣಕಾರ ಬಿಡುಗಡೆಗೊಳಿಸುವರು.


ಮಾಜಿ ಸಚಿವ ಹರತಾಳು ಹಾಲಪ್ಪ, ಶಾಸಕ ವಿ.ಎಸ್. ಪಾಟೀಲ್, ಕೆ.ಎಸ್. ಗುರುಮೂರ್ತಿ, ಶಿವಲಿಂಗಯ್ಯ ಅಲ್ಲಯ್ಯನವರಮಠ, ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಅವರಗೊಳ್ಳ ಓಂಕಾರ ಸ್ವಾಮೀಜಿ, ಬಿಳಿಕಿ ರಾಚೋಟೇಶ್ವರ ಸ್ವಾಮೀಜಿ, ರಟ್ಟಿಹಳ್ಳಿ ಶಿವಲಿಂಗ ಸ್ವಾಮೀಜಿ, ಹುಣಸಘಟ್ಟದ ಗುರುಮೂರ್ತಿ ಸ್ವಾಮೀಜಿ, ತೊಗರ್ಸಿ ಚನ್ನವೀರ ದೇಶಿಕೇಂದ್ರ ಸ್ವಾಮೀಜಿ, ನುಗ್ಗೇಹಳ್ಳಿ ಡಾ. ಮಹೇಶ್ವರ ಸ್ವಾಮೀಜಿ ಉಪಸ್ಥಿತರಿರುವರು.

ಮೇ 7ರಂದು ಬೆಳಗ್ಗೆ ಕ್ಷೇತದ ಎಲ್ಲ ದೈವಗಳಿಗೆ ವಿಶೇಷ ಪೂಜೆ ಸಂಜೆ ಶ್ರೀ ಜಗದ್ಗುರು ಪಂಚಾಚಾರ್ಯ ಧ್ವಜಾರೋಹಣ ನೆರವೇರುವುದು. ನರಸಾಪುರದ ವೀರಭದ್ರ ಸ್ವಾಮೀಜಿ, ನಾಗವಂದದ ಶಿವಯೋಗಿ ಶಿವಾನಂದ ಸ್ವಾಮೀಜಿ, ಗೋವಿನಕೋವಿ ಶಿವಯೋಗಿ ವಿಶ್ವಾರಾಧ್ಯ ಸ್ವಾಮೀಜಿ, ಲಿಂಗಸುಗೂರು ನಂದಿಕೇಶ್ವರಿ ಅಮ್ಮನವರು ನೇತೃತ್ವ ವಹಿಸುವರು.

ಮೇ 8ರಂದು ರೇವಣಸಿದ್ಧೇಶ್ವರ ಶಿವಾಚಾರ್ಯರ ಶ್ರೀ ಗುರು ಪಟ್ಟಾಧಿಕಾರದ ನಿಮಿತ್ತ ವಿಶೇಷ ಧಾರ್ಮಿಕ ಕಾರ್ಯಗಳು ಜರುಗಲಿದ್ದು, ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು ಷಟಸ್ಥಲ ಬ್ರಹ್ಮೋಪದೇಶ ಅನುಗ್ರಹಿಸುವರು. ಪಂಚ ಪೀಠಗಳಪ್ರತೀಕವಾಗಿಮಳಲಿಡಾ.ನಾಗಭೂಷಣ ಸ್ವಾಮೀಜಿ (ಶ್ರೀ ರಂಭಾಪುರಿ ಪೀಠ), ತೊಗರ್ಸಿ ಮಹಾಂತದೇಶಿಕೇಂದ್ರ ಸ್ವಾಮೀಜಿ (ಶ್ರೀ ಉಜ್ಜಯಿನಿ ಪೀಠ) ಚನ್ನಗಿರಿ ಡಾ. ಕೇದಾರಲಿಂಗ ಶಿವಶಾಂತವೀರ ಸ್ವಾಮೀಜಿ (ಶ್ರೀ ಕೇದಾರ ಪೀಠ), ಹೊನ್ನಾಳಿ ಒಡೆಯರ್‌ಚನ್ನಮಲ್ಲಿಕಾರ್ಜುನ ಸ್ವಾಮೀಜಿ (ಶ್ರೀಶೈಲ ಪೀಠ) ಹಾಗೂ ಹಾರನಹಳ್ಳಿ-ಜಕ್ಕಲಿ ವಿಶ್ವಾರಾಧ್ಯ ಸ್ವಾಮೀಜಿ (ಶ್ರೀ ಕಾಶೀ ಪೀಠ) ಉಪಸ್ಥಿತರಿರುವರು.

ಮೇ 9ರ ಸಂಜೆ 4.30 ಗಂಟೆಗೆ ಕಡೇನಂದಿಹಳ್ಳಿ ಹೋಳಿನ ಹಂಪೇಶ್ವರಸ್ವಾಮಿ ದೇವಸ್ಥಾನದಿಂದ ಮಳೆಮಲ್ಲೇಶ್ವರಸ್ವಾಮಿ ದೇವಸ್ಥಾನದವರೆಗೆ ರೇವಣಸಿದ್ಧೇಶ್ವರ ಶಿವಾಚಾರ್ಯರ ಅಡ್ಡಪಲ್ಲಕ್ಕಿ ಮಹೋತ್ಸವ ಸಕಲ ವಾದ್ಯ ವೈಭವಗಳೊಂದಿಗೆ ನಡೆಯುವುದು. ಕನ್ನೂರು-ಸಿಂಧನೂರು ಸೋಮನಾ ಸ್ವಾಮೀಜಿ, ಹಾರನಹಳ್ಳಿ ಶಿವಯೋಗಿ ಸ್ವಾಮೀಜಿ, ಕಾರ್ಜುವಳ್ಳಿ ಸದಾಶಿವ ಸ್ವಾಮೀಜಿ ನೇತೃತ್ವ ವಹಿಸುವರು. ಸಿಗಂಧೂರು ಡಾ.ಎಸ್. ರಾಮಪ್ಪ, ಈರೇಶ ಎನ್.ವಿ., ಎಸ್.ಪಿ. ನಾಗರಾಜಪ್ಪಗೌಡ್ರು, ಎಂ.ಪಿ. ಕವಿರಾಜ್, ಸುಧೀರ ಮಾರವಳ್ಳಿ, ಬಸವರಾಜಪ್ಪ ಚನ್ನಳ್ಳೇರ, ಸುದರ್ಶನ ಎಚ್. ಅತಿಥಿಗಳಾಗಿ ಆಗಮಿಸುವರು ಎಂದುಕಡೇನಂದಿಹಳ್ಳಿಶ್ರೀಗುರುರೇವಣಸಿದ್ಧೇಶ್ವರ ಜನಕಲ್ಯಾಣ ಟ್ರಸ್ಟಿ ಪ್ರಕಟಣೆ ತಿಳಿಸಿದೆ.

ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ 12ರಂದು ಪ್ರವೇಶ ಪರೀಕ್ಷೆ



• **ಕನ್ನಡಪ್ರಭ ವಾರ್ತೆ** ಬ್ಯಾಡಗಿ

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪ್ರತಿಷ್ಠಿತ ಶಾಲೆಯಾಗಿ ತಾಲೂಕಿನ ಶಿಡೇನೂರ ಗ್ರಾಮದ ಡಾ.ಬಿ.ಆರ್. ಅಂಬೇಡ್ಕರ್ ಪ್ರೌಢಶಾಲೆ ಆಯ್ಕೆಯಾಗಿದ್ದು ಸನ್ 2026-27ನೇ ಸಾಲಿನ 8ನೇ ತರಗತಿಗೆ ಪ್ರವೇಶ ಬಯಸುವ ಎಸ್ಸಿ/ಎಸ್ಟಿ ವಿದ್ಯಾರ್ಥಿಗಳಿಗೆ ಶೇ. 8:2 ಅನುಪಾತದಲ್ಲಿ ಮೇ 12ರಂದು ಬೆಳಗ್ಗೆ 10 ಗಂಟೆಗೆ ಶಾಲಾ ಆವರಣದಲ್ಲಿ ಪ್ರವೇಶ ಪರೀಕ್ಷೆ ಏರ್ಪಡಿಸಲಾಗಿದೆ.

ಆಯ್ಕೆಯಾದ ವಿದ್ಯಾರ್ಥಿಗಳಿಗೆ ಉಚಿತ ವಸತಿ ನಿಲಯ ಹಾಗೂ ಶೈಕ್ಷಣಿಕ ಸೌಲಭ್ಯವಿದ್ದು, 7ನೇ ತರಗತಿ ಉತ್ತೀರ್ಣರಾದ ಬಗ್ಗೆ ಅಂಕಪಟ್ಟಿ ಹಾಗೂ ಪೋಷಕರ ಆದಾಯ ಪ್ರಮಾಣ ಪತ್ರದೊಂದಿಗೆ (ಕಡ್ಡಾಯ ಮಿತಿ ರು.2 ಲಕ್ಷ) ಮೇ 12ರಂದು ಸರಿಯಾದ ಸಮಯಕ್ಕೆ ಹಾಜರಿರಲು ಕೋರಲಾಗಿದೆ. ಹೆಚ್ಚಿನ ವಿವರಗಳಿಗೆ ಮುಖ್ಯಶಿಕ್ಷಕ ಜಿ. ಮಾರುತಿ-(6360571342) ಅವರನ್ನು ಸಂಪರ್ಕಿಸಬಹುದಾಗಿದೆ.

